ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ

Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯವರೆಗೆ

ಕನ್ನಡದಿನ ಪತ್ರಿಕೆ

KANNADA MATHRUBHOOMI

KANNADA DAILY PAPER

ಸಂಪಾದಕರು : ಶ್ಯಾಮ್ ಸುಂದರ್.ಎಲ್

EDITOR : SHYAM SUNDER L

mathrubhoomircr@gmail.com

Call : 9886635117

ಸಂಪುಟ : 03 Volume : 03 | ಸಂಚಿಕೆ : 183 Issue : 183 | ದಿನಾಂಕ : 02-05-2026 Date : 02-05-2026 | ಶನಿವಾರ Saturday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : 04 Pages : 04 | ರೂ 2 Rs. 2

## ಎಸ್‌ಎಸ್‌ಎಲ್‌ಸಿ ಪಾಸ್ ಆದವರಿಗೂ ಪ್ಯಾರಾಮೆಡಿಕಲ್ ಕೋರ್ಸ್ ಸೇರಲು ಅವಕಾಶ ಕಲ್ಪಿಸಿದ ಹೈಕೋರ್ಟ್

**ಬೆಂಗಳೂರು,ಏ.1-**2026-27ನೇ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅರೆ ವೈದ್ಯಕೀಯ (ಪ್ಯಾರಾಮೆಡಿಕಲ್) ಸಂಸ್ಥೆಗಳಲ್ಲಿ ಕೆಲವು ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಿ ಹೈಕೋರ್ಟ್ ಮಧ್ಯಂತರ ಆದೇಶ ನೀಡಿದೆ.

ರಾಜ್ಯದಲ್ಲಿ ಸುಮಾರು 640 ಕಾಲೇಜುಗಳನ್ನು ಹೊಂದಿರುವ ಕರ್ನಾಟಕ ಅರೆ ವೈದ್ಯಕೀಯ ಸಂಸ್ಥೆಗಳ ನಿರ್ವಹಣಾ ಸಂಘ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರಿದ್ದ ನ್ಯಾಯಪೀಠ ಈ ಮಧ್ಯಂತರ ಆದೇಶ ನೀಡಿತು.

2026-27ರ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಪ್ಯಾರಾಮೆಡಿಕಲ್‌ನ ಕೋರ್ಸ್‌ಗಳಾದ ಪ್ರಯೋಗಾಲಯ ತಂತ್ರಜ್ಞಾನ, ಅಪ್ಟೋಮೆಟ್ರಿ ತಂತ್ರಜ್ಞಾನ, ಡಿಪ್ಲೊಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಮತ್ತು ಇಮೇಜಿಂಗ್ ತಂತ್ರಜ್ಞಾನ ಸೇರಿದಂತೆ ವಿವಿಧ ಕೋರ್ಸ್ ಗಳಿಗೆ ಸೇರಿಸಿಕೊಳ್ಳಬಹುದು ಎಂದು ಕೋರ್ಟ್ ಆದೇಶಿಸಿದೆ.

➘4

## ಮಹಾನಗರ ಪಾಲಿಕೆ ಚುನಾವಣೆ ಮುಂದಿನ ಮೂರು ತಿಂಗಳಲ್ಲಿ ನಡೆಸಲು ಕಲ್ಬುರ್ಗಿ ಹೈಕೋರ್ಟ ಆದೇಶ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**ರಾಯಚೂರು ಮಹಾನಗರ ಪಾಲಿಕೆಗೆ ಮುಂದಿನ ಮೂರುತಿಂಗಳೊಳಗೆ ಚುನಾವಣಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸುವಂತೆ ಕಲ್ಬುರ್ಗಿ ಹೈಕೋರ್ಟ ಆದೇಶ ನೀಡಿದೆ. ನಗರಸಭೆ ಅಧ್ಯಕ್ಷ ಉಪಾಧ್ಯಕ್ಷರ ಅವಧಿ ಪೂರ್ಣವಾಗದೇ ಇರುವ ಕುರಿತು ಆಕ್ಷೇಪ ವ್ಯಕ್ತಪಡಿಸಿ 23 ಜನರು ಕಲ್ಬುರ್ಗಿ ಹೈಕೋರ್ಟ ಪೀಠದ ಮೊರೆ ಹೋಗಿದ್ದರು. ಪ್ರಕರಣ ವಿಚಾರಣೆ ನಡೆಸಿ ದ್ವಿ ಸದಸ್ಯ ಪೀಠ ನಿಗಧಿತ ಅವಧಿಯೊಳಗೆ ಪ್ರಕ್ರಿಯೆಗಳನ್ನು ನಡೆಸುವದು ಬಾಧ್ಯತೆಯಾಗಿದ್ದು ಆಡಳಿತ ಸಮಸ್ಯೆಯಿಂದ ಚುನಾಯಿತ ಆಡಳಿತ ಮಂಡಳಿಗೆ ನಿಗಧಿತ ಅವಧಿ ಅಧಿಕಾರ ನಡೆಸಲು ಕಾಲಾವಕಾಶ ನೀಡಬೇಕಿತ್ತು ಎಂದು ಹೈಕೋರ್ಟ ಅಭಿಪ್ರಾಯ ಪಟ್ಟಿದೆ.




ರಾಯಚೂರು ನಗರಸಭೆ ಚುನಾವಣೆ 2018 ಸೆಪ್ಟಂಬರ್ 3 ರಂದು ನಡೆದಿದ್ದು, ಚುನಾವಣಾ ಅಧಿಕಾರಿಗಳು 2019 ಸೆಪ್ಟಂಬರ್ 13 ರಂದು ಘೋಷಣೆಮಾಡಿದ್ದು, 2020 ನವಂಬರ್ 2 ರಂದು ನಗರಸಭೆ ಮೊದಲ ಸಭೆ ನಡೆಸಲಾಗಿತ್ತು. 2013 ಮೇ11 ರಂದು ನಗರಸಭೆ ಅಧ್ಯಕ್ಷ ಉಪಾಧ್ಯಕ್ಷ 30 ಅವಧಿಗೆ ಅಧಿಕಾರಕ್ಕೆ ಬರಲಾಯಿತು. ರಾಜ್ಯ ಸರ್ಕಾರ ವಿಳಂಭವಾಗಿ ಅಧ್ಯಕ್ಷ ಉಪಾಧ್ಯಕ್ಷ ಮೀಸಲಾತಿ ಘೋಷಣೆ ಮಾಡಿದ್ದರಿಂದ 2023 ಮೇ 11 ರಿಂದ 2024 ಆಗಸ್ಟ 28 ಅವಧಿಯಲ್ಲಿ ಆಡಳಿತಾಧಿಕಾರಿಯನ್ನು ನೇಮಿಸಲಾಗಿತ್ತು. 2024 ಡಿಸೆಂಬರ್ 4 ರಂದು ನಗರಸಭೆಯನ್ನು ಮಹಾನಗರಪಾಲಿಕೆಯನ್ನಾ ಮೇಲ್ದರ್ಜೆಗೆರಿಸಿದ್ದರಿಂದ ಚುನಾಯಿತ ಮಂಡಳಿಗೆ ನಿಗಧಿ ಅವಧಿ ಅಧಿಕಾರ ನಡೆರಸಲು ಸಾಧ್ಯವಾಗಿಲ್ಲ. 15 ತಿಂಗಳು ಅವಧಿ ಆಡಳಿತ ನಡೆಸಲು ಅವಕಾಶ

➘4

### ಎಂಆರ್‌ಪಿ ಮೀರಿ ನೀರಿನ ಬಾಟಲಿ ಮಾರಾಟ

## ಲಕ್ಷ್ಮೀ ಬಾರ್ ಆ್ಯಂಡ್ ರೆಸ್ಟೋರೆಂಟ್ ಸೇರಿ ಹಲವೆಡೆ ಗ್ರಾಹಕರಿಗೆ ವಂಚನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**ನಗರದಲ್ಲಿನ ಹೋಟೆಲ್‌ಗಳು ಮತ್ತು ಬಾರ್-ರೆಸ್ಟೋರೆಂಟ್‌ಗಳಲ್ಲಿ ಪ್ಯಾಕೇಜ್ಡ್ ನೀರಿನ ಬಾಟಲಿಗಳನ್ನು ಎಂಆರ್‌ಪಿಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುವ ದಂಧೆ ಮತ್ತೆ ಬಯಲಾಗುತ್ತಿದೆ.

ಲಕ್ಷ್ಮೀ ಬಾರ್ ಆ್ಯಂಡ್ ರೆಸ್ಟೋರೆಂಟ್‌ನಲ್ಲಿ 30ರೂ. ಮೌಲ್ಯದ 2 ಲೀಟರ್ ನೀರಿನ ಬಾಟಲಿಯನ್ನು 48ಕ್ಕೆ ಮಾರಾಟ ಮಾಡಿರುವುದು ಗ್ರಾಹಕರೊಬ್ಬರ ಬಳಿ ಇರುವ ಬಿಲ್ ಮೂಲಕ ಬಹಿರಂಗವಾಗಿದೆ.

ಈ ಘಟನೆ ಒಂದೇ ಹೋಟೆಲ್‌ಗೆ ಸೀಮಿತವಾಗಿಲ್ಲ ಎಂಬುದೇ ಆತಂಕಕಾರಿ ಸಂಗತಿ. ನಗರದ ಹಲವೆಡೆ ಇದೇ ರೀತಿಯ ಅಕ್ರಮ ನಡೆಯುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ.

ಎಂಆರ್‌ಪಿಗಿಂತ ಹೆಚ್ಚು ಹಣ ಕೇಳಿದಾಗ, ಕೂಲಿಂಗ್ ಚಾರ್ಜ್, ಸರ್ವಿಸ್ ಚಾರ್ಜ್ ಎಂಬ ನೆಪ ನೀಡಿ ಹೆಚ್ಚುವರಿ ಹಣ ವಸೂಲಿ ಮಾಡುತ್ತಾರೆ ಎಂಬ ಗ್ರಾಹಕರ ಆರೋಪಗಳು ಕೇಳಿಬರುತ್ತಿವೆ.

ಈಗಾಗಲೇ ಹಿಂದೊಮ್ಮೆ ಸಹಾಯಕ ಆಯುಕ್ತರು ಹಾಗೂ ಸಂಬಂಧಪಟ್ಟ ಆಹಾರ ಇಲಾಖೆ ಅಧಿಕಾರಿಗಳು ನಗರದಲ್ಲಿ ದಾಳಿ ನಡೆಸಿ, ಕೆಲ ಹೋಟೆಲ್‌ಗಳಿಗೆ ನೋಟೀಸ್ ನೀಡಿದ್ದರೂ ಸಹ, ಇಂತಹ ಅಕ್ರಮಗಳು ಇನ್ನೂ ಮುಂದುವರಿಯುತ್ತಿರುವುದು ಅಧಿಕಾರಿಗಳ ಕ್ರಮದ ಪರಿಣಾಮಕಾರಿತ್ವದ ಮೇಲೆ ಪ್ರಶ್ನೆ ಎಬ್ಬಿಸಿದೆ.

ಪ್ಯಾಕೇಜ್ಡ್ ವಸ್ತುಗಳನ್ನು ನಿಗದಿತ ಎಂಆರ್‌ಪಿ ಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುವುದು ಕಾನೂನುಬಾಹಿರ. ಆದರೂ ನಿರ್ಬಂಧವಿಲ್ಲದೆ ನಡೆಯುತ್ತಿರುವ ಈ ದಂಧೆ, ಗ್ರಾಹಕರ ಹಕ್ಕುಗಳ ಉಲ್ಲಂಘನೆಯಾಗಿದೆ.

ತಕ್ಷಣವೇ ಸಂಬಂಧಪಟ್ಟ ಇಲಾಖೆ ನಗರದಾದ್ಯಂತ ಸಮಗ್ರ ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಯಾರೋ ಸಿಂಪಲ್ ಸುಧಾ ಗಂಡ ಅಂತೆ ನನಗೆ ಗೊತ್ತಿಲ್ಲ: ವಾರಕ್ಕೆ 75 ಗಂಟೆ ಕೆಲಸ ಮಾಡಬೇಕಂತೆ; ನಾರಾಯಣ ಮೂರ್ತಿ ವಿರುದ್ಧ ಹರಿಪ್ರಸಾದ್ ಗರಂ

**ಬೆಂಗಳೂರು,ಮೇ.1-**ಕಾರ್ಮಿಕ ದಿನಾಚರಣೆ ಪ್ರಯುಕ್ತ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿಂದು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ವಿಧಾನಪರಿ ಷತ್ ಸದಸ್ಯ ಬಿ.ಕೆ ಹರಿಪ್ರಸಾದ್, ಇನ್ಫೋಸಿಸ್ ನಾರಾಯಣ ಮೂರ್ತಿ ಅವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಡಾ.ಬಿ.ಆರ್ ಅಂಬೇಡ್ಕರ್ ದಿನಕ್ಕೆ 8 ಗಂಟೆ ಕೆಲಸ ಮಾಡಬೇಕು ಅಂತ ಹೇಳಿದರು. ಆದರೆ, ಆಯಮ್ಮ ಯಾರೋ ಸಿಂಪಲ್ ಸುಧಾ ಅಂತೆ ನನಗೆ ಗೊತ್ತಿಲ್ಲ, ಆಯಮ್ಮನ ಗಂಡ ಪತಿ ವಾರಕ್ಕೆ 75 ಗಂಟೆ ಕೆಲಸ ಮಾಡಬೇಕು ಎಂದಿದ್ದಾರೆ. ದಿನಕ್ಕೆ 12 ಗಂಟೆ ಕೆಲಸ ಮಾಡಬೇಕು ಅಂದರೆ ನಾವೇನು ಪ್ರಾಣಿಗಳಾ? ಎಂದು ನಾರಾಯಣ ಮೂರ್ತಿ ವಿರುದ್ಧ ಕಿಡಿಕಾರಿದ್ದಾರೆ.

## ಬುದ್ಧ ಜಯಂತಿ: ಬುದ್ಧ ಮಾರ್ಗದಲ್ಲಿ ನಡೆದಾಗ ಜೀವನ ಸಾರ್ಥಕತೆ-ಡಾ.ಹಂಪಣ್ಣ ಸಜ್ಜನ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**ಜೀವನವನ್ನು ಪರಿಪೂರ್ಣವಾಗಿಸಲು ಬುದ್ಧರ ಮಾರ್ಗಗಳಲ್ಲಿ ನಡೆಯಬೇಕು ಆಗ ಮಾತ್ರ ಪ್ರತಿಯೊಬ್ಬರ ಜೀವನ ಸಾರ್ಥಕವಾಗುತ್ತವೆ ಎಂದು ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್ ಹೇಳಿದರು.

ಅವರಿಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಭಗವಾನ್ ಬುದ್ಧರ 2570ನೇ ಜಯಂತಿ ಆಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.




ಸರ್ಕಾರದಿಂದ ಪ್ರತಿ ವರ್ಷವೂ 40ಕ್ಕಿಂತ ಹೆಚ್ಚು ಜಯಂತಿಯನ್ನು ಆಚರಿಸಲಾಗುತ್ತದೆ. ಆ ಮಹಾತ್ಮರ ಮಾರ್ಗಗಳಲ್ಲಿ ನಡೆಯುವುದು ಅವರ ತತ್ವಾದರ್ಶಗಳನ್ನು ಪಾಲಿಸುವುದು. ಅವರ ವಿಚಾರಗಳನ್ನು ಅಳವಡಿಸಿಕೊಂಡಾಗ ಮಾತ್ರ ಜೀವನದಲ್ಲಿ ಸಾರ್ಥಕತೆ ಸಿಗಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಉತ್ತಮ ಜೀವನವನ್ನು ನಡೆಸಲು, ಪರಿಪೂರ್ಣವಾಗಿಸಲು ಬುದ್ಧರ ಉಪದೇಶಗಳನ್ನು ಪಾಲಿಸುವುದು ಅತ್ಯಂತ ಮುಖ್ಯವಾಗಿರುತ್ತದೆ ಎಂದು ಹೇಳಿದರು.

ಭಗವಾನ್ ಬುದ್ಧರು ಶಾಂತಿ, ಪ್ರೀತಿ ಹಾಗೂ ಸೌಹಾರ್ದತೆಯ ಸಂದೇಶಗಳನ್ನು ನಮ್ಮ ಯುವ ಪೀಳಿಗೆಯವರು ಪಾಲಿಸುವಂತಾಗಬೇಕು. ಬುದ್ಧನ ಪ್ರಮುಖ ಬೋಧನೆಗಳಲ್ಲಿ ಸಕಲ

➘4

## ರಾಹುಲ್ ಗಾಂಧಿಗೆ ಅಲಹಾಬಾದ್ ಹೈಕೋರ್ಟ್‌ನಿಂದ ಬಿಗ್ ರಿಲೀಫ್..!

**ಅಲಹಾಬಾದ್,ಮೇ.1-**2025 ರಲ್ಲಿ ನೀಡಿದ್ದ ವಿವಾದಾತ್ಮಕ ಹೇಳಿಕೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ಎಫ್ ಐಆರ್ ದಾಖಲಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಅಲಹಾಬಾದ್ ಹೈಕೋರ್ಟ್ ಶುಕ್ರವಾರ ವಜಾಗೊಳಿಸಿದೆ.



ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿರುವ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಲು ನಿರ್ದೇ ಶನಗಳನ್ನು ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಸಂಭಾಲ್

➘4

## ಕಾರ್ಮಿಕರ ದಿನಾಚರಣೆ: ಸಿಐಟಿಯುನಿಂದ ರ್‍ಯಾಲಿ : ಸಂಘಟಿತ ಹೋರಾಟಕ್ಕೆ ಕರೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**140ನೇ ವಿಶ್ವ ಕಾರ್ಮಿಕ ದಿನಾಚರಣೆಯನ್ನು ನಗರದಲ್ಲಿ ಸಿಐಟಿಯು ಜಿಲ್ಲಾ ಸಮಿತಿ ನೇತೃತ್ವದಲ್ಲಿ ಆಚರಿಸಲಾಯಿತು.

ಕಾರ್ಮಿಕ ದಿನಾಚರಣೆ ಅಂಗವಾಗಿ ಬಹಿರಂಗ ಸಭೆ ಹಾಗೂ ರ್‍ಯಾಲಿ ನಡೆಸಲಾಯಿತು. ಧ್ವಜಾರೋಹಣವನ್ನು ಸಿಐಟಿಯು ಜಿಲ್ಲಾಧ್ಯಕ್ಷೆ ಹೆಚ್.ಪದ್ಮಾ ನೆರವೇರಿಸಿದರು. ಸಭೆಯನ್ನುದ್ದೇಶಿಸಿ ಸಿಐಟಿಯು ಜಿಲ್ಲಾ ಉಪಾಧ್ಯಕ್ಷ ಪ್ರವೀಣರೆಡ್ಡಿ ಗುಂಜಳ್ಳಿ ಮಾತನಾಡಿ, ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರವು 4 ಹೊಸ ಕಾರ್ಮಿಕರ ಕಾಯ್ದೆಗಳನ್ನು ಜಾರಿಗೆ ತಂದಿದೆ. ಈ ಮೂಲಕ ದೇಶದ ಕಾರ್ಮಿಕ ವರ್ಗವು ಸ್ವಾತಂತ್ರ್ಯ ಪೂರ್ವದಿಂದಲೂ ಪಡೆದ ಹಲವು ಮೂಲಭೂತ ಹಕ್ಕುಗಳನ್ನು ಮೊಟಕುಗೊಳಿಸಲಾಗಿದೆ. ಕೆಲಸದ ಅವಧಿ ಹೆಚ್ಚಳ, ಸಾಮಾಜಿಕ ರಕ್ಷಣೆಯ ಯೋಜನೆಗಳನ್ನು ದುರ್ಬಳಗೊಳಿಸುವುದು, ನಿಯಮಿತವಧಿಯಲ್ಲಿ ಕಾರ್ಮಿಕರನ್ನು ನೇಮಕ ಮಾಡಲು ಅವಕಾಶ ಹಾಗೂ ಕಾರ್ಖಾನೆಗಳನ್ನು ಮುಚ್ಚಲು ಮಾಲೀಕರಿಗೆ ಮುಕ್ತ ಅವಕಾಶ ಮಾಡಿಕೊಡುವ ಮೂಲಕ ಮಾರಕವಾದ ನಿಯಾಮಗಳನ್ನು ಈ ಸಂಹಿತೆಗಳ ಮೂಲಕ ಜಾರಿ ಮಾಡಲಾಗಿದೆ.

ಮಾಲೀಕರು ಮಾಡುವ ಅಮಾನವಿಯ ಶೋಷಣೆಯ ವಿರುದ್ಧ ಕಾನೂನು ಬದ್ಧ ಮುಷ್ಕರ ಮಾಡುವ ಹಕ್ಕನ್ನು ಈ ಸಂಹಿತೆಗಳು ನಿರಾಕಾರಿಸುತ್ತವೆ. ಇಂತಹ ಕಾರ್ಮಿಕರ ವಿರೋಧಿ ನೀತಿಗಳನ್ನು ಜಾರಿಗೆ ತರುತ್ತಿರುವ ಕೇಂದ್ರ ಸರ್ಕಾರದ ವಿರುದ್ಧ ಐಕ್ಯ ಹೋರಾಟಕ್ಕೆ ಕಾರ್ಮಿಕರು ಮುಂದಾಗಬೇಕಾದ ಅಗತ್ಯ ವಿದೆ, ಇಲ್ಲವಾದಲ್ಲಿ ಕಾರ್ಮಿಕರಿಗೆ ಭವಿಷ್ಯವಿಲ್ಲ. ರಾಜ್ಯದಲ್ಲಿ ರಾಜ್ಯ ಸರ್ಕಾರ ದೇಶದ ಸಂವಿಧಾನವು ನೀಡಿದ ಅವಕಾಶಗಳನ್ನು ಬಳಸಿಕೊಂಡು ರಾಜ್ಯ ಸರ್ಕಾರಿ ಈ ಸಂಹಿತೆಗಳಿಗೆ ಕಾರ್ಮಿಕರ ಪರವಾದ ತಿದ್ದುಪಡಿಗಳನ್ನು ಮಾಡಬೇಕೆಂದು ಒತ್ತಾಯಿಸಿದರು.

ರಾಜ್ಯದಲ್ಲಿ ಕನಿಷ್ಟ ವೇತನ ಜಾರಿಗೆ ರಾಜ್ಯ ಸರ್ಕಾರ ಮುಂದಾಗ ಬೇಕೆಂದು ಒತ್ತಾಯಿಸಿದ ಅವರು ಇದೇ ತಿಂಗಳು ಮೇ 30 ರಂದು ವೈಜ್ಞಾನಿಕ ಕನಿಷ್ಟ ವೇತನ ಜಾರಿಗೆ

➘4

## ಬುದ್ಧಪೂರ್ಣಿಮೆ: ಭಾವಚಿತ್ರದ ಮೆರವಣಿಗೆ, ಸ್ಮರಣೆ-ಗಣ್ಯರಿಂದ ನಮನ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**ಬುದ್ಧ ಪೂರ್ಣಿಮೆ ಅಂಗವಾಗಿ ಜಿಲ್ಲಾಡಳಿತದಿಂದ ಬುದ್ಧ ವಿಹಾರದಲ್ಲಿ ಬುದ್ಧನ ಪ್ರತಿಮೆಗೆ ಪೂಜೆ ಸಲ್ಲಿಸುವ ಮೂಲಕ ಅದ್ದೂರಿಯಾಗಿ ಚಾಲನೆ ನೀಡಲಾಯಿತು. ಸಾರ್ವಜನಿಕ ಉದ್ಯಾವನದಿಂದ ಪ್ರಾರಂಭವಾದ ಬುದ್ಧನ ಭಾವಚಿತ್ರ ಮೆರವಣಿಗೆ ಅಂಬೇಡ್ಕರ ವೃತ್ತದ ಮೂಲಕ ಪಂಡಿತ ಸಿದ್ದರಾಮಜಂಬಲದಿನ್ನಿ ರಂಗಮಂದಿರವರೆಗೆ ಮೆರವಣಿಗೆ ನಡೆಯಿತು.

ಡಾ.ಬಿ.ಆರ್.ಅಂಬೇಡ್ಕರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು.

ಜಿಲ್ಲಾಧಿಕಾರಿ ನಿತೀಶ್, ಎಸ್‌ಪಿ ಅರುಣ್ನಾಂಗಿರಿ, ಜಿಲ್ಲಾಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ

➘4

### ಎಐಯುಟಿಯುಸಿಯಿಂದ ವಿಶ್ವ ಕಾರ್ಮಿಕ ದಿನಾಚರಣೆ

## ಕಾರ್ಮಿಕರ ಹಕ್ಕುಗಳ ಮೇಲೆ ನೇರ ದಾಳಿ ವಿರುದ್ಧ ಹೋರಾಡಿ-ಸೋಮಶೇಖರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**ಕಾರ್ಮಿಕರ ಹಕ್ಕುಗಳನ್ನು ಪಡೆದುಕೊಳ್ಳಲು ನಡೆದ ಯಶಸ್ವಿ ಹೋರಾಟ ಮೇ ದಿನ ಎಂದೆ ಖ್ಯಾತವಾಗಿದೆ. ಈ ಚಾರಿತ್ರಿಕ ದಿನ ನಮ್ಮೆಲ್ಲರಿಗೂ ಹೋರಾಟವನ್ನು ಬೆಳಸಲು ಸ್ಪೂರ್ತಿ ನೀಡುತ್ತದೆ ಎಂದು ಕಾರ್ಮಿಕ ಮುಖಂಡರಾದ ಕೆ. ಸೋಮಶೇಖರ್ ಎಂದರು.

ಅವರು ನಗರದ ಟಿಪ್ಪು ಸುಲ್ತಾನ ಉದ್ಯಾನವನದಲ್ಲಿ ಎಐಯುಟಿಯುಸಿ ಕೇಂದ್ರೀಯ ಕಾರ್ಮಿಕ ಸಂಘಟನೆಯ ನೇತೃತ್ವದಲ್ಲಿ ಹಮ್ಮಿಕೊಂಡ 140ನೇ ಅಂತರರಾಷ್ಟ್ರೀಯ ಕಾರ್ಮಿಕ ದಿನಾಚರಣೆಯಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು.

ಇಡೀ ವಿಶ್ವದ ದುಡಿಯುವ ಜನರು ಹೋರಾಟದ ಸ್ಪೂರ್ತಿಯಿಂದ ಕೈಗೊಳ್ಳುವ ಐಕ್ಯ ಕಾರ್ಯಾಚರಣೆ ಎಂದರೆ, ಅದು ಐತಿಹಾಸಿಕ ಮೇ ದಿನ. ರಕ್ತಾಕ್ಷರಗಳಿಂದ ಬರೆದ ಈ ದಿನದ 140ನೇ ವಾರ್ಷಿಕೋತ್ಸವದ ದಿನವಾಗಿದೆ ಎಂದರು.

ಈ ಬಾರಿ ಮೇ ದಿನವನ್ನು ಸಾಮ್ರಾಜ್ಯಶಾಹಿ ಯುದ್ಧ, ದುರಾಕ್ರಮಣ, ಶೋಷಣೆ ಹಾಗೂ ಕಷ್ಟಾರ್ಜಿತ ಹಕ್ಕುಗಳ ಹರಣದ ವಿರುದ್ಧ ಪ್ರಪಂಚದಾದ್ಯಂತ ಕಾರ್ಮಿಕವರ್ಗದ ಐಕ್ಯ ಹೋರಾಟದ ದಿನವಾಗಿ ಆಚರಿಸಲಾಗುತ್ತದೆ ಎಂದರು.

ಮೇ ದಿನದ ಇತಿಹಾಸವು, 8 ಗಂಟೆಗಳ ಕೆಲಸದ ಅವಧಿಯಂತಹ ಮಹತ್ವದ ಹಕ್ಕುಗಳು ಹೇಗೆ ಕಠಿಣ ಹೋರಾಟಗಳ ಮೂಲಕ ಗಳಿಸಿದಂತಹವು ಎಂಬುದನ್ನು ನೆನಪಿಸುತ್ತದೆ. ಆದರೆ, ಇಂದು ಬಂಡವಾಳಶಾಹಿ ವ್ಯವಸ್ಥೆ ತನ್ನ ಲಾಭವನ್ನು ಹೆಚ್ಚಿಸಿಕೊಳ್ಳಲು ದುಡಿಯುವ ಜನರ ಮೇಲೆ ಕೆಲಸದ ಹೊರೆ ಹೆಚ್ಚಿಸುತ್ತಿದ್ದು, 12 ಗಂಟೆಗಳ ಅಥವಾ ಅದಕ್ಕಿಂತ ಹೆಚ್ಚಿನ ಕೆಲಸದ ಅವಧಿಯನ್ನು ಹೇರಲು ಪ್ರಯತ್ನಿಸುತ್ತಿದೆ. ನಮ್ಮ ದೇಶದಲ್ಲಿ ಆಳುವ ವರ್ಗವು ಕಾರ್ಮಿಕರ ಹಕ್ಕುಗಳ ಮೇಲೆ ನೇರ ದಾಳಿ ನಡೆಸುತ್ತಿದೆ. ದಶಕಗಳ ಹೋರಾಟಗಳಿಂದ ಪಡೆದ 29 ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿ,4 ಕಾರ್ಮಿಕ ಸಂಹಿತೆಗಳ ಹೆಸರಿನಲ್ಲಿ ಕಾರ್ಮಿಕ ವಿರೋಧಿ ನೀತಿಗಳನ್ನು ಹೇರಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ ಜಿಲ್ಲಾ ಅಧ್ಯಕ್ಷ ತಿರುಮಲ ರಾವ್ ಅವರು ಮಾತನಾಡಿ, ರಾಜ್ಯದಲ್ಲೂ ಸಹ ಸರ್ಕಾರವು ಈ ಕಾಯ್ದೆಗಳಿಗೆ ನಿಯಮಗಳನ್ನು ರೂಪಿಸಿ ಕಾರ್ಯಗತಗಳಿಸಲು ತರಾತುರಿಯಲ್ಲಿದೆ. ಲಕ್ಷಾಂತರ ಗುತ್ತಿಗೆ ಕಾರ್ಮಿಕರ ಸೇವಾಭದ್ರತೆ ಹಾಗೂ ಖಾಯಮಾತಿ ಬಗ್ಗೆ ನಿರ್ಲಕ್ಷ ಹಾಗೂ ದಿವ್ಯ ಮೌನವಹಿಸಿದೆ. 2022 ರಲ್ಲೇ ಪರಿಷ್ಕರಿಸಬೇಕಾದ ಕನಿಷ್ಠ ವೇತನದ ಬಗ್ಗೆ ಯಾವುದೇ ಮಾತನಾಡದೇ ಪಾತಕೀ ನಿರ್ಲಕ್ಷವನ್ನು ತಾಳಿದೆ. ಒಟ್ಟಾರೆ

➘4

## ಪತಿ ಇಫ್ತೇಖರುದ್ದಿನ್‌ನಿಂದ ಕಿರುಕುಳ: ಸುಳ್ಳು ಆರೋಪ ರಕ್ಷಣೆ ನೀಡಲು ಮಹೇರುನ್ನೀಸಾ ಬೇಗಂ ಮನವಿ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಮೇ.1-**ನನ್ನ ಪತಿ ಇಫ್ತೇಖರುದ್ದೀನ್ ಅಲಿಯಾಸ್ ಮದನಿ ಸ್ವಂತ ಪತ್ನಿ ವಿರುದ್ಧ ಸಲ್ಲದ ಹೇಳಿಕೆ ನೀಡಿ ವಿಡಿಯೋ ಮಾಡಿ ಸಮಾಜಿಕ ಜಾಲತಾಣದಲ್ಲಿ ಮಹಿಳೆಯ ಘನತೆ,ಸ್ವಾಭಿಮಾನದ ಹರಣ ಮಾಡಿದ್ದು ಕೂಡಲೇ ಕಾನೂನು ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕೆಂದು ಇಫ್ತೇಕರುದ್ದೀನ್ ಪತ್ನಿ ಮೆಹರುನ್ನಿಸಾ ಬೇಗಂ ಆರೋಪಿಸಿದರು.

ಅವರಿಂದ ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಪತಿ ಇಫ್ತೇಖರುದ್ದೀನ್ ಹಾಗೂ ಅವರ ಮನೆಯವರ ಕಿರುಕುಳ,ಹಿಂಸೆಯಿಂದ ಬೇಸತ್ತು ಪ್ರತ್ಯೇಕ ಮನೆಯಲ್ಲಿ ವಾಸ ಮಾಡುತ್ತಿದ್ದೇನೆ. ಎರಡುವರೆವರ್ಷಗಳಿಂದ ಕುಟುಂಬ ನಿರ್ವಹಣೆ ಮಾಡದೇ ಇರುವ ಇಫ್ತೇಖರುದೀನ್ ಸುಳ್ಳು ಆರೋಪ ಹೊರಿಸುವ ಉದ್ದೇಶದಿಂದ ಮಾನಹಾನಿ ಮಾಡಿದ್ದಾನೆ. ಏ.17 ರಂದು ಸುಳ್ಳು ಆರೋಪಗಳನ್ನು ಮಾಡಿದ್ದಾರೆ ಎಂದು ದೂರಿದರು.



ಏ.6ರಂದು ಮನೆಯಲ್ಲಿದ್ದಾಗ ರಾತ್ರಿ ಏರ್ ಕೂಲರ್‌ನಲ್ಲಿ ವಿದ್ಯುತ್ ಪ್ರವಹಿಸುತ್ತಿದ್ದರಿಂದ ಸಹಾಯಕ್ಕಾಗಿ ದಾನಿಶ್ ಇವರನ್ನು ಕೋರಿದ್ದರಿಂದ ಅವರು ಬಂದಾಗಲೇ ವಿಡಿಯೋ ಮಾಡಿ ತಪ್ಪು ಮಾಹಿತಿಯನ್ನು ಹರಡುವ ಪ್ರಯತ್ನ ಮಾಡಿದ್ದು ಅವರ ವಿರುದ್ದ ಸುಳ್ಳು ಕೇಸ್ ದಾಖಲಿಸಿದ್ದಾರೆ. ಮದುವೆಯಾಗಿನಿಂದ ಇಫ್ತೇಖರುದ್ದೀನ್ ಕುಟುಂಬದಕಿರುಕುಳ ನೀಡುತ್ತಾ ಬಂದಿದ್ದು ಮರುಮದುವೆ ಮಾಡಿಕೊಳ್ಳುವ ಉದ್ದೇಶದಿಂದ ನನ್ನ ಬಗ್ಗೆ ತಪ್ಪು ಸುದ್ದಿ ಹರಡುತ್ತಿದ್ದಾರೆ ಎಂದರು.

ಎಸ್‌ಡಿಪಿಐ ಕಾರ್ಯಕರ್ತ ಮೊಹ್ಮದ್ ಶಫಿ ಮತ್ತುದಾನಿಶ್ ಇವರು ಅಣ್ಣನಾಗಿ ಸಹಾಯಕ್ಕೆ ಬಂದಿದ್ದಾರೆ ಹೊರತು ಬೇರ್‍ಯಾವದೇ ಉದ್ದೇಶವಿಲ್ಲ. ಇಫ್ತೇಖರುದ್ದೀನ್ ವಿರುದ್ದ ಮಹಿಳಾ ಠಾಣೆಯಲ್ಲಿ ಏ.21 ರಂದು ಭಾರತೀಯ ನ್ಯಾಯ ಸಂಹಿತೆ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿರುವದಾಗಿ ಹೇಳಿದರು.

ಇಬ್ಬರು ಮಕ್ಕಳೊಂದಿಗೆ ಜೀವನ ಸಾಗಿಸುತ್ತಿದ್ದು ಮಾನಸಿಕ,ಸಾಮಾಜಿಕ, ಹಿಂಸೆ ನೀಡುತ್ತಿರುವ ವಿರುದ್ದ ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕು. ಮಹಿಳೆಯೊಬ್ಬರಿಗೆ ಆಗುತ್ತಿರುವ ಅನ್ಯಾಯ ನಿಲ್ಲಿಸಬೇಕಿದೆ. ವೈಯಕ್ತಿಕವಾಗಿ ನನ್ನ ಹೋರಾಟವಲ್ಲ. ಮಹಿಳೆಯರ ಮೇಲೆ ನಡೆಯುತ್ತಿರುವ ಶೋಷಣೆ ವಿರುದ್ದ ನಡೆಯುತ್ತಿರುವ ಹೋರಾಟಕ್ಕೆ ಮಹಿಳೆಯರು ಬೆಂಬಲಿಸಬೇಕೆಂದರು.

# ಅರಿವುನೊಳಗೆ ಅರಿವು ನೋಡುವುದೇ ಅಧ್ಯಾತ್ಮ - ಪ್ರೊ.ಜಿ.ವೆಂಕಟೇಶ

ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,** ಇಡೀ ಭಾರತದಲ್ಲಿ ಬೇರೆ ಬೇರೆ ರೀತಿಯಲ್ಲಿ ತತ್ವಪದಗಳು ಬೇರೆ ಬೇರೆ ವಿನ್ಯಾಸದಲ್ಲಿ ಕರೆಯಲಾಗುತ್ತದೆ. ದರ್ಶನ, ಅನುಭಾವ, ಅಧ್ಯಾತ್ಮ ಎಂಬ ಮೂರು ಮುಖ್ಯ ಭಾಗಗಳಿವೆ ಈ ಮೂರು ಹಂತಗಳನ್ನು ಹೊರಗಡೆ ನೋಡುವ ದರ್ಶನಕ್ಕಿಂತ ನಿನ್ನೊಳಗಿನ ದರ್ಶನ ಮೊದಲು ನೋಡು ಎಂದು ಬೆಂಗಳೂರಿನ ವಿಶ್ರಾಂತ ಕುಲಪತಿಗಳಾದ ಪ್ರೊ.ಮಲ್ಲೇಪುರಂ ಜಿ.ವೆಂಕಟೇಶ ಅವರು ಉದ್ಘಾಟಕ ನುಡಿಗಳನ್ನಾಡಿದರು.

ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ ಹಾಗೂ ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ ಸಹಯೋಗ ಹಾಗೂ ಕನ್ನಡ ಅಧ್ಯಯನ ವಿಭಾಗ ವತಿಯಿಂದ ವಿವಿ ಸಭಾಂಗಣದಲ್ಲಿ ತತ್ವ ಪದ ಸಾಹಿತ್ಯ: ನಡೆ-ನುಡಿ ಮೌಲ್ಯ ಒಂದು ದಿನದ ವಿಚಾರ ಸಂಕೀರ್ಣ ಉದ್ಘಾಟಿಸಿ ಮಾತನಾಡಿದ ಅವರು ಅಧ್ಯಾತ್ಮ ಎಂದರೇ ತನ್ನ ಒಳಗೆ ತಾನು ನೋಡಿಕೊಳ್ಳುವುದು ಅಂದರೇ ಅರಿವಿನೊಳಗೆ ಅರಿವು ನೋಡುವುದೇ ಅಧ್ಯಾತ್ಮವಾಗಿದೆ. ಅರಿವನ್ನು ನೋಡಲು ಗುರುವಿನ ಮಾರ್ಗ ಅಗತ್ಯವಾಗಿದೆ. ಗುರುಶಿಷ್ಯರ ಪರಂಪರೆ ಅಧ್ಯಾತ್ಮದಲ್ಲಿ ಕಾಣಬಹುದು. ನಿನ್ನೊಳಗಿನ ಅರಿವು ತಿಳಿದು ಅರಿತು ಪ್ರತಿಯೊಬ್ಬರು ಬೆಳಗುವ ದೀಪವಾಗಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಾಲ್ಮೀಕಿ ವಿವಿ ಕುಲಪತಿಗಳಾದ ಪ್ರೊ.ಶಿವಾನಂದ ಕೆಳಗಿನಮನಿ ಮಾತನಾಡಿ, ಶೈವ, ಕೀರ್ತನೆ, ವಚನ, ತತ್ವಪದಗಳಲ್ಲಿ ನಮ್ಮೊಳಗಿನ ಅರಿವು ಜ್ಞಾನದ ಬೆಳಕಾಗಿ ಹೊರಹೊಮ್ಮುವುದು ತಿಳಿಸುತ್ತವೆ. ತತ್ವಪದಕಾರರು ತತ್ವಪದಗಲಲ್ಲಿ ಅರಿವು ಗುರು ಪರಂಪರೆಯ ನೆಲೆಗಳನ್ನು ಕಾಣುವ ಮೂಲಕ ಗುರು ತೋರಿದ ಮಾರ್ಗದಲ್ಲಿ ನಡೆಯಬೇಕು ಎಂದು ತತ್ವಪದಕಾರರ ಗುರು ಪರಂಪರೆಯನ್ನು ತಿಳಿಸಿದರು.

ಮಧ್ಯಕಾಲೀನ ಭಕ್ತಿ ಸಾಹಿತ್ಯದಲ್ಲಿ ತತ್ವಪದಕಾರರು ಕುರಿತು ಚಿತ್ರದುರ್ಗದ ಡಾ.ಕರಿಯಪ್ಪ ಮಾಳಗಿ, ತತ್ವಪದಕಾರರು ನಿರೂಪಿಸಿದ ನುಡಿ ಸಮಾಜ ಕುರಿತು ಬೆಂಗಳೂರಿನ ಡಾ.ಎಲ್.ಜಿ.ಮೀರಾ, ತತ್ವಪದಕಾರ್ತಿಯರು ಸಂವಾದಿಸಿದ ದೇಸೀ ಲೋಕ ವಿಷಯದ ಕುರಿತು ಧಾರವಾಡದ ಡಾ.ವಿನಯಾ ಒಕ್ಕುಂದ ಅವರು ಗೋಷ್ಠಿಯಲ್ಲಿ ಮಂಡಿಸಿದರು ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಕಾರ್ಯಕ್ರಮದಲ್ಲಿ ಕುಲಸಚಿವರರಾದ ಡಾ.ಎ.ಚನ್ನಪ್ಪ, ಕುಲಸಚಿವ (ಮೌಲ್ಯಮಾಪನ) ಪ್ರೊ.ಜ್ಯೋತಿ ದಮ್ಮ ಪ್ರಕಾಶ್, ಡಾ.ದಸ್ತಗೀರ್ ಸಾಬ್ ದಿನ್ನಿ ಅವರು ವೇದಿಕೆ ಮೇಲೆ ಉಪಸ್ಥಿತರಿದ್ದರು. ವಿಜ್ಞಾನ ನಿಕಾಯ ಡೀನರಾದ ಪ್ರೊ.ಪಾರ್ವತಿ.ಸಿ.ಎಸ್., ವಾಣಿಜ್ಯ ನಿಕಾಯ ಡೀನರಾದ ಪ್ರೊ.ಪಿ.ಭಾಸ್ಕರ್, ಕಲಾ ನಿಕಾಯ ಡೀನರಾದ ಡಾ.ಲತಾ ಎಂ.ಎಸ್. ಎನ್.ಎಸ್.ಎಸ್. ಸಂಯೋಜಕರಾದ ಡಾ.ಜಿ.ಎಸ್.ಬಿರಾದಾರ, ಕನ್ನಡ ವಿಭಾಗದ ಡಾ.ಶರಣಪ್ಪ ಚಲವಾದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ವಿವಿಧ ವಿಭಾಗಗಳ ಬೋಧಕ-ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಡಾ.ಶರಣಪ್ಪ ಗೋನಾಳ ಮತ್ತು ಪ್ರತಿಭಾ ಗೋನಾಳ ತಂಡದಿಂದ ತತ್ವಪದ ಗಾಯನ ಮಾಡಿದರು. ಉಪ ಕುಲಸಚಿವರಾದ ಡಾ.ಕೆ.ವೆಂಕಟೇಶ ಸ್ವಾಗತಿಸಿದರು, ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷರಾದ ಕಾ.ತ.ಚಿಕ್ಕಣ್ಣ ಪ್ರಸ್ತಾವಿಕ ಮಾತನಾಡಿದರು.

ಕನ್ನಡ ವಿಭಾಗದ ಉಪನ್ಯಾಸಕಿ ಡಾ.ಶಿವಲೀಲಾ ನಿರೂಪಿಸಿ ವಂದಿಸಿದರು, ಡಾ.ರಾಜೇಶ್ವರಿ ವಿಚಾರ ಗೋಷ್ಠಿ ನಿರ್ವಹಿಸಿದರು, ಡಾ. ಗೀತಾಂ ಜಲಿ ಉದ್ಘಾಟಕರನ್ನು ಪರಿಚಯಿ ಸಿದರು. ವಿಚಾರ ಗೋಷ್ಠಿಯಲ್ಲಿ ಭಾಗವಹಿದವರಿಗೆ ಪ್ರಮಾಣ ಪತ್ರ ನೀಡಲಾಯಿತು.

# ಮುಷ್ಟೂರು : ಡಾ.ಬಿ.ಆರ್. ಅಂಬೇಡ್ಕರ್ ಅವರ ಮೂರ್ತಿ ಅನಾವರಣ

ಕನ್ನಡ ಮಾತೃ ಭೂಮಿ ವಾರ್ತೆ



**ಅರಕೇರಾ,** ಡಾ. ಬಿ.ಆರ್. ಅಂಬೇಡ್ಕರ್ ಅವರು ಸಮಾನತೆ ಮತ್ತು ನ್ಯಾಯಕ್ಕಾಗಿ ತಮ್ಮ ಜೀವನವನ್ನೇ ಅರ್ಪಿಸಿದ್ದಾರೆ ಎಂದು ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಶ್ರೀದೇವಿ ನಾಯಕ ಹೇಳಿದರು.

ತಾಲೂಕಿನ ಮುಷ್ಟೂರು ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್‌ರವರ 135ನೇ ಜಯಂತ್ಯೋತ್ಸವ ಪ್ರಯುಕ್ತ ಮೂರ್ತಿ ಅನಾವರಣ ಮತ್ತು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಗುರುವಾರ ಮಾತನಾಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಆಧುನಿಕ ಭಾರತದ ನಿರ್ಮಾಣಕ್ಕೆ ನೀಡಿದ ಕೊಡುಗೆಗಳು ಬಹುಮುಖಿ ಮತ್ತು ಅಮೂಲ್ಯವಾದವು. ಅವರು ಕೇವಲ ಸಂವಿಧಾನ ಶಿಲ್ಪಿಯಷ್ಟೇ ಅಲ್ಲದೆ, ಅರ್ಥಶಾಸ್ತ್ರಜ್ಞ, ಕಾರ್ಮಿಕ ನಾಯಕ ಮತ್ತು ಸಾಮಾಜಿಕ ಕ್ರಾಂತಿಕಾರಿಯಾಗಿದ್ದರು ಎಂದರು.

ಕರಾಥ ಮಹಾಸಭಾ ಜಿಲ್ಲಾಧ್ಯಕ್ಷ ಶಿವರಾಜ ಜಾನೇಕಲ್ ಮಾತನಾಡಿ, ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರಾಗಿ, ಭಾರತಕ್ಕೆ ವಿಶ್ವದ ಅತಿದೊಡ್ಡ ಲಿಖಿತ ಸಂವಿಧಾನವನ್ನು ನೀಡಿದರು. ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ, ಸ್ವಾತಂತ್ರ್ಯ ಮತ್ತು ನ್ಯಾಯವನ್ನು ಖಚಿತಪಡಿಸುವ ಮೂಲಕ ಪ್ರಜಾಪ್ರಭುತ್ವಕ್ಕೆ ಭದ್ರ ಬುನಾದಿ ಹಾಕಿದರು.

ಸಮಾಜ, ರಾಜಕೀಯ ಮತ್ತು ಅರ್ಥಶಾಸ್ತ್ರದ ಬಗ್ಗೆ ಹೊಸ ಆಲೋಚನೆ ಹೊಂದಿದ್ದರು. ಜಾತಿ-ಮತಗಳ ಭೇದವಿಲ್ಲದ ಒಂದು ಬಲಿಷ್ಠ ಮತ್ತು ಸಮಾನ ಸಮಾಜದ ನಿರ್ಮಾಣಕ್ಕಾಗಿ ಶ್ರಮಿಸಿದ್ದಾರೆ ಎಂದರು.

ಪ್ರಮುಖರಾದ ಅಂಬ್ರಯ್ಯ ಸ್ವಾಮಿ, ಶಿವಜಾತಯ್ಯ ಸ್ವಾಮಿ, ಗೌರಿ ನಾಯಕ, ಮಾಳೇಶ ಬೊಮ್ಮಾಳ, ಬಸವರಾಜ ಪೂಜಾರಿ, ಮರಿಲಿಂಗಪ್ಪ ಹೆಗ್ಗಡದಿನ್ನಿ, ಧನಂಜಯ್ಯ ಶಿವಂಗಿ, ನರಸಮ್ಮ ವಕ್ಕಪ್ಪ, ಅಣ್ಣಾರಾವ್, ಮಲ್ಲಪ್ಪ ದೇವರಮನಿ,

ಬಸವರಾಜ ಹಟ್ಟಿ, ರಾಜಕುಮಾರಡಿ, ಹಂಪಯ್ಯ ಕೆ, ಶಿವರಾಜ ಪೂಜಾರಿ, ಎನ್, ಲಿಂಗಪ್ಪ, ಮಹಾಂತೇಶ ಭವಾನಿ, ರೆಡ್ಡೆಪ್ಪ, ರಂಗಪ್ಪ ಹಾಳಜಾಡಲದಿನ್ನಿ, ರಾಮಣ್ಣ ಎನ್ ಗಣೇಕಲ್, ಸಿದ್ದಲಿಂಗಪ್ಪ ಕಾಕರಗಲ್ ಇತರರಿದ್ದರು.

# ಪ್ರೊ.ಬಿ.ಕೃಷ್ಣಪ್ಪ ರವರ ಪುಣ್ಯಸ್ಮರಣೆ ಆಚರಣೆ

ಕನ್ನಡ ಮಾತೃ ಭೂಮಿ ವಾರ್ತೆ



**ಮಾನ್ವಿ,** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬಹುಜನ ಸಮಾಜ ಪಕ್ಷದಿಂದ ಪ್ರೊ.ಬಿ. ಕೃಷ್ಣಪ್ಪ ರವರ ಪುಣ್ಯಸ್ಮರಣೆ ಅಂಗವಾಗಿ ಪ್ರೊ.ಬಿ.ಕೃಷ್ಣಪ್ಪರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಬಹುಜನ ಸಮಾಜ ಪಕ್ಷದ ರಾಜ್ಯ ಕಾರ್ಯದರ್ಶಿ ಶ್ಯಾಮ್ ಸುಂದರ ಕುಂಬಾದಾಳ ಮಾತನಾಡಿ ಪ್ರೊ.ಬಿ.ಕೃಷ್ಣಪ್ಪರವರು ಕಾನ್ಸಿರಾಮರವರು 1972ರಲ್ಲಿ ಸ್ಥಾಪಿಸಿದ ಬಾಮ್ ಸೇಫ್ ಸಂಘಟನೆಯಿಂದ ಪ್ರೇರಿತರಾಗಿ ದಲಿತ ಸಂಘರ್ಷ ಸಮಿತಿಯನ್ನು ಸ್ಥಾಪಿಸಿದರು.

ಹಾಗೂ ಬಹುಜನ ಸಮಾಜ ಪಕ್ಷಕ್ಕೆ ಬೆಂಬಲ ನೀಡುವ ಮೂಲಕ ದಲಿತರು ಕೂಡ ರಾಜಕೀಯ ಕ್ಷೇತ್ರಕ್ಕೆ ಪ್ರವೇಶ ಪಡೆಯುವುದಕ್ಕೆ ಅವಕಾಶ ಕಲ್ಪಿಸುವ ಮೂಲಕ ರಾಜ್ಯದಲ್ಲಿ ರಾಜಕೀಯ ಸ್ಥಾನಮಾನಗಳನ್ನು ಪಡೆಯುವುದಕ್ಕೆ ಅವಕಾಶ ನೀಡಿದರು. ಅದ್ದರಿಂದ ವಿಧಾನಸೌಧ ಮುಂಭಾಗದಲ್ಲಿ ಪ್ರೊ.ಬಿ. ಕೃಷ್ಣಪ್ಪ ರವರ ಮೂರ್ತಿಯನ್ನು ಪ್ರತಿಷ್ಠಾಪಿಸಬೇಕು.

ಜೂ.9ರಂದು ಸರ್ಕಾರದ ವತಿಯಿಂದ ಪ್ರೊ.ಬಿ.ಕೃಷ್ಣಪ್ಪರವರ ಜಯಂತಿಯನ್ನು ಆಚರಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾನ್ವಿ ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಚಂದ್ರಶೇಖರ, ತಾ. ಸಂಯೋಜಕರಾದ ಶಿವಲಿಂಗಯ್ಯ ಸ್ವಾಮಿ, ನಗರ ಘಟಕ ಅಧ್ಯಕ್ಷರಾದ ಚಂದ್ರಶೇಖರಯ್ಯ ಸ್ವಾಮಿ, ಮುಖಂಡರಾದ ರವೀಂದ್ರ, ಜಾನಕಲ್, ಮಲ್ಲಿಕಾರ್ಜುನ, ಶರಣಯ್ಯ ಸ್ವಾಮಿ, ಖಾಸಿಂ, ಬಾಬಾ, ಚನ್ನಬಸವ ಹಡಪದ, ತಾಯಪ್ಪ ದೊಡ್ಡಿ, ಮಹಮ್ಮದ್, ಸೇರಿದಂತೆ ಇನ್ನಿತರರು ಇದ್ದರು.

# ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೇಷನರಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಅಣುಕು ವ್ಯಕ್ತಿತ್ವ ಪರೀಕ್ಷೆ ಆಯೋಜನೆ

ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,** ಕರ್ನಾಟಕ ಲೋಕಸೇವಾ ಆಯೋಗ (ಕೆ.ಪಿ.ಎಸ್.ಸಿ) ವತಿಯಿಂದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್-ಎ ಹಾಗೂ ಬಿ ವೃಂದದ ಒಟ್ಟು 384 ಹುದ್ದೆಗಳ (310-ಆರ್‌ಪಿಸಿ+ 74-ಹೆಚ್‌ಕೆ) ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ಮುಖ್ಯ ಪರೀಕ್ಷೆಯಲ್ಲಿ ತೇರ್ಗಡೆಗೊಂಡು 1:3ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಸಂದರ್ಶನ ಪೂರ್ವ ಸಿದ್ಧತೆ ಹಾಗೂ ಆತ್ಮವಿಶ್ವಾಸ ವೃದ್ಧಿ ಉದ್ದೇಶದಿಂದ ರಾಯಚೂರು ಜಿಲ್ಲಾಡಳಿತ ವತಿಯಿಂದ ಅಣುಕು ವ್ಯಕ್ತಿತ್ವ ಪರೀಕ್ಷೆ (Joem Pewsoqboi|¦ Ues|) ಆಯೋಜಿಸಲಾಗುತ್ತಿದೆ.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ವಿಷಯ ಜ್ಞಾನದ ಜೊತೆಗೆ ವ್ಯಕ್ತಿತ್ವ, ಸಂವಹನ ಕೌಶಲ್ಯ, ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ, ಆಡಳಿತಾತ್ಮಕ ಮನೋಭಾವ ಹಾಗೂ ಸಮಕಾಲೀನ ವಿಷಯಗಳ ಅರಿವು ಅತ್ಯಂತ ಅವಶ್ಯಕವಾಗಿದೆ.

ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳಿಗೆ ನೈಜ ಸಂದರ್ಶನದ ಅನುಭವ ಕಲ್ಪಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ರೂಪಿಸಲಾಗಿದೆ.

ಅಣುಕು ವ್ಯಕ್ತಿತ್ವ ಪರೀಕ್ಷೆಯಲ್ಲಿ ಅನುಭವಿ ಜಿಲ್ಲಾಮಟ್ಟದ ಅಧಿಕಾರಿಗಳು, ವಿಷಯ ತಜ್ಞರು, ಹಿರಿಯ ಸ್ಪರ್ಧಾತ್ಮಕ ಪರೀಕ್ಷಾ ಮಾರ್ಗದರ್ಶಕರು ಹಾಗೂ ಸಂದರ್ಶನ ಪ್ಯಾನೆಲ್ ಸದಸ್ಯರು ಭಾಗವಹಿಸಿ, ಅಭ್ಯರ್ಥಿಗಳ ಸಂದರ್ಶನ ನಡೆಸುವ ಮೂಲಕ ವೈಯಕ್ತಿಕ ಪ್ರತಿಕ್ರಿಯೆ, ಸಂದರ್ಶನ ತಂತ್ರಗಳು, ಸಾಮಾನ್ಯ ತಪ್ಪುಗಳು ಹಾಗೂ ವ್ಯಕ್ತಿತ್ವ ಅಭಿವೃದ್ಧಿಗೆ ಸಂಬಅಧಿಸಿದ ಉಪಯುಕ್ತ ಸಲಹೆಗಳನ್ನು ನೀಡಲಿದ್ದಾರೆ.

ಭಾಗವಹಿಸಲು ಇಚ್ಚಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಹೆಸರು, ಪರೀಕ್ಷಾ ನೋಂದಣಿ ಸಂಖ್ಯೆ, ಸಂಪರ್ಕ ಸಂಖ್ಯೆ ಹಾಗೂ ಮುಖ್ಯ ಪರೀಕ್ಷೆಯ ವಿವರಗಳನ್ನು ಜಿಲ್ಲಾಡಳಿತದ ಸೂಚನೆಯಂತೆ ಮುಂಚಿತವಾಗಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ.

ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾರ್ಯಕ್ರಮ ಆಯೋಜನಾ ಅಧಿಕಾರಿಗಳಾದ ಮಹಮ್ಮದ್ ಯೂಸೂಫ್, ಯೋಜನಾ ನಿರ್ದೇಶಕ'ರು ಸಿಯೋಲ್ ಇವರ ಮೊಬೈಲ್ ಸಂಖ್ಯೆ: 9964012161ಗೆ ಸಂಪರ್ಕ ಮಾಡಬಹುದಾಗಿದೆ. ಕಾರ್ಯಕ್ರಮದ ದಿನಾಂಕ ಹಾಗೂ ಸ್ಥಳವನ್ನು ಶೀಘ್ರದಲ್ಲೇ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

ಜಿಲ್ಲೆಯ ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳು ಈ ಅಪರೂಪದ ಅವಕಾಶವನ್ನು ಸದುಪಯೋಗಪಡಿಸಿಕೊಂಡು ವ್ಯಕ್ತಿತ್ವ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನಕಗಿರಿ : ಈರಣ್ಣ ಮೂರ್ತಿ ಪ್ರತಿಷ್ಠಾಪನೆ ಸಂಪನ್ನ

ಕನ್ನಡ ಮಾತೃ ಭೂಮಿ ವಾರ್ತೆ



**ಕನಕಗಿರಿ,**ಪಟ್ಟಣದ 9ನೇ ವಾರ್ಡಿನ ಈರಣ್ಣ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಮೂರ್ತಿ ಪ್ರತಿಷ್ಠಾಪನೆ ಬುಧವಾರ ಸಂಪನ್ನವಾಯಿತು.

ಈರಣ್ಣ ದೇವಸ್ಥಾನದಲ್ಲಿ ಮೂರು ದಿನಗಳಿಂದ ಹೋಮ ಹಾವನ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಮೂರ್ತಿ ಪ್ರತಿಷ್ಠಾಪನೆ ವಿಜೃಂಭಣೆಯಿಂದ ಜರುಗಿತು.

ಇಲಕಲ್ಲನಿಂದ ಆಗಮಿಸಿದ ಮೇಣೆದಾಳ ಬಂಧುಗಳು, ಸ್ಥಳೀಯರ ಸಹಕಾರದೊಂದಿಗೆ ವಾರ್ಡಿನ, ಹಾಗೂ ಊರಿನ ಭಕ್ತಾದಿಗಳೊಂದಿಗೆ ಮೂರ್ತಿ ಪ್ರತಿಷ್ಠಾಪನೆ ಸಂಪನ್ನಗೊಂಡಿತು. ಭಕ್ತಾದಿಗಳು ತನು, ಮನ, ಧನದಿಂದ ಈರಣ್ಣ ದೇವರ ಸೇವೆಗೈದರು. ನಂತರ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆ ಮಾಡಲಾಯಿತು.

ಕನಕಗಿರಿ ಕ್ಷೇತ್ರದ ಶಾಸಕರು, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು, ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ತಂಗಡಗಿ ಸಹೋದರ ರವಿ ತಂಗಡಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀ ಈರಣ್ಣ ದೇವರ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ಗಂಗಾಧರ ತಾತ, ವೀರೇಶ ಸಮಗಂಡಿ, 9ನೇ ವಾರ್ಡಿನ ಪಟ್ಟಣ ಪಂಚಾಯತ್ ಸದಸ್ಯರಾದ ರಾಜಾಸಾಬ್ ನಂದಾಪುರ, ಈಶಪ್ಪ ಮೇಣೇದಾಳ, ಶಂಕರ ಮೇಣೇದಾಳ, ತುಕಾರಾಮ್ ಗೊಂದಳೇ, ಶ್ರೀನಿವಾಸ್ ಮೇಣೇದಾಳ, ನಾರಾಯಣಪ್ಪ ಮೇಣೇದಾಳ, ಈರಣ್ಣ ಸೇವಾ ಸಮಿತಿಯ ಅಧ್ಯಕ್ಷರಾದ ಶರಣಪ್ಪ ಮಹಿಪತಿ, ಉಪಾಧ್ಯಕ್ಷ ಅನಿಲ್ ಕುಮಾರ್ ಕಲಾಲ್, ಗೌರವ ಅಧ್ಯಕ್ಷರಾದ ನಾಗೇಶಪ್ಪ ಕೊರಗಟಿಗಿ, ಸಹ ಕಾರ್ಯದರ್ಶಿ ಕನಕರಾಯ ಕೊರಗಟಿಗಿ, ಶಿವರಾಜ್ ನಾಯಕ, ಪ್ರಜ್ವಲ್ ಗೊಂದಳೇ, ಹಾಗೂ ಸರ್ವ ಸದಸ್ಯರು, ಮತ್ತು ಮೇಣೇದಾಳ ಬಂಧುಗಳು, ಇತರರು ಉಪಸ್ಥಿತರಿದ್ದರು.

# ಬಳ್ಳಾರಿಯಲ್ಲಿ ಮಹಿಳೆಯರಿಗೆ ಉಚಿತ ವಾಹನ ಚಾಲನಾ ತರಬೇತಿ ಆರಂಭ



ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ಮಹಿಳೆಯರ ಸಬಲೀಕರಣದ ದಿಸೆಯಲ್ಲಿ ನಗರದ ವಾಸವಿ ಶಾಲೆಯ ಸಭಾಂಗಣದಲ್ಲಿ ಅನುಭವ ಮಂಟಪ ಸಂಸ್ಥೆಯ ನೇತೃತ್ವದಲ್ಲಿ ಉಚಿತ ಚಾಲನಾ ತರಬೇತಿ ಕಾರ್ಯಕ್ರಮವನ್ನು ಗುರುವಾರ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅಲ್ಲಭವನದ ಎಂ.ಡಿ.ಅಲ್ಲಂ ರಚನಾ ಅವರು, ಮಹಿಳೆಯರು ಸ್ವಾವಲಂಬಿಯಾಗಿ ಬದುಕಲು ಕೌಶಲ್ಯಾಭಿವೃದ್ಧಿ ಅತ್ಯಗತ್ಯವಾಗಿದೆ. ಇಂದಿನ ದಿನಗಳಲ್ಲಿ ವಾಹನ ಚಾಲನೆ ತಿಳಿದಿರುವುದು ಮಹಿಳೆಯರ ಆತ್ಮವಿಶ್ವಾಸವನ್ನು ಹೆಚ್ಚಿಸುವುದಲ್ಲದೆ, ಉದ್ಯೋಗಾವಕಾಶಗಳಿಗೂ ದಾರಿ ಮಾಡಿಕೊಡುತ್ತದೆ ಎಂದು ಹೇಳಿದರು.

ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಹಂಪಿ ರಮಣ ಮಾತನಾಡಿ, ಮಹಿಳೆಯರು ಧೈರ್ಯದಿಂದ ಮುಂದೆ ಬಂದು ಕೌಶಲ್ಯಗಳನ್ನು ಕಲಿತು ಜೀವನದಲ್ಲಿ ಮುಂದುವರಿಯಬೇಕು ಎಂದು ಕರೆ ನೀಡಿದರು. ಚಾಲನಾ ತರಬೇತಿ ಪಡೆದರೆ ರಾಪಿಡೋ, ಉಬರ್, ಓಲಾ ಮುಂತಾದ ಸೇವೆಗಳ ಮೂಲಕ ಉದ್ಯೋಗಾವಕಾಶಗಳನ್ನು ಪಡೆಯಬಹುದು ಎಂದರು.

ನಂತರ ಭಾರತಿ ಮತ್ತು ಹಟ್ಟಿ ಗೀತಾ ಅವರು ಮಾತನಾಡಿ, ಕಾರು ಚಾಲನೆಯನ್ನು ಕೇವಲ ಆಸಕ್ತಿ ಅಥವಾ ಫ್ಯಾಷನ್ ಆಗಿ ನೋಡದೆ, ಜೀವನೋಪಾಯದ ಮಾರ್ಗವನ್ನಾಗಿ ರೂಪಿಸಿಕೊಳ್ಳಬೇಕು. ಇದನ್ನು 8ನೇ ತರಗತಿಯಿಂದ ಮತ್ತು 12ನೇ ತರಗತಿ ಪಾಸ್ ಅಥವಾ ಫೇಲಾದಂತಹ ಮಹಿಳೆಯರು ಈ ತರಬೇತಿಯನ್ನು ಉಚಿತವಾಗಿ ಪಡೆಯಬಹುದು ಎಂದು ತಿಳಿಸಿದರು. ಇಂತಹ ತರಬೇತಿಗಳು ಮಹಿಳೆಯರ ಆರ್ಥಿಕ ಸ್ವಾವಲಂಬನೆ ಮತ್ತು ಜೀವನದಾರಕ್ಕೆ ಸಹಕಾರಿ ಆಗುತ್ತದೆ ಎಂದರು.

ಕೊನೆಯಲ್ಲಿ ಶಾಲೆಯ ಪ್ರಾಂಶುಪಾಲ ವೀರೇಶ್ ಅವರು ಮಾತನಾಡಿ, ಶಿಕ್ಷಣದ ಜೊತೆಗೆ ಜೀವನ ಕೌಶಲ್ಯಗಳನ್ನು ಕಲಿಯುವುದು ಅಗತ್ಯವಾಗಿದ್ದು, ಮಹಿಳೆಯರು ಈ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಟ್ಟಿ ಗೀತಾ, ಅನುಭವ ಮಂಟಪ ಸಂಸ್ಥೆಯ ಹೋಮ್ ಪ್ರಿಯಾ, ಲೋಹಿತ್ ಕುಮಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸ್ವಚ್ಛತೆಗೆ ಆದ್ಯತೆ ನೀಡಿ ಸಾಂಕ್ರಾಮಿಕ ರೋಗ ಬರದಂತೆ ಸ್ವಚ್ಛಗೊಳಿಸಿ ಅಧಿಕಾರಿ ಸಿಬ್ಬಂದಿಗೆ ಉಮೇಶ ಚವ್ಹಾಣ ಸೂಚನೆ !

## ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ್ ಹೋರಾಟಕ್ಕೆ ಸ್ಪಂದಿಸಿದ ನಗರಸಭೆ ಅಧಿಕಾರಿಗಳು

ಕನ್ನಡ ಮಾತೃ ಭೂಮಿ ವಾರ್ತೆ



**ಯಾದಗಿರಿ,**ನಗರದ ಗಂಜ್ ಸರ್ಕಲ್‌ನ ದೊಡ್ಡಕೆರೆಯ ಕೆಳಭಾಗ ದಲ್ಲಿರುವ ವಾರ್ಡ್ ನಂಬರ್ 11 ರಲ್ಲಿ ಬರುವ ಆಶ್ರಯ ಕಾಲೋನಿ (ಅಶೋಕ ನಗರ) ಕ್ಕೆ ಮೂಲಸೌಕರ್ಯಗಳು ಮರೀಚಿಕೆಯಾಗಿದ್ದು, ಈ ಕಾಲೋನಿ ಯಲ್ಲಿ ಕುಡುಕರ ಪುಂಡ ಪೋಕರಿ ಅಡ್ಡವಾಗಿ ಮಾರ್ಪಟ್ಟಿದೆ, ದಾಖಲೆಯಲ್ಲಿ ರಸ್ತೆ ಇದ್ದರು ಮುಖ್ಯ ರಸ್ತೆಗೆ ಸಂಪರ್ಕ ಇಲ್ಲದೆ ಪರದಾಡುವಂತಹ ಪರಸ್ಥಿತಿ ನಿರ್ಮಾಣವಾಗಿದೆ ಎಂದು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಆರೋಪಿಸಿದ ಹಿನ್ನಲೆಯಲ್ಲಿ ನಗರ ಸಭೆ ಪೌರಾಯುಕ್ತರಾದ ಉಮೇಶ ಚವ್ಹಾಣ ಅವರು

ಬುಧವಾರ ಬೆಳಿಗ್ಗೆ ಆಶ್ರಯ ಕಾಲೋನಿ ಗೆ ಬೇಟಿ ನೀಡಿ ನಗರ ಉದ್ದಕ್ಕೂ ಎಲ್ಲಾ ಕಡೆ ಕಾಲ್ನಡಗಿಯಲ್ಲಿ ಸಂಚಾರ ಮಾಡಿ ಪರಿಶೀಲಿಸಿದ ನಂತರ ಮಾತನಾಡಿದ ಅವರು ಈ ಕಾಲೋನಿ ಸ್ವಚ್ಛತೆಗೊಳಿಸಿ ವಿಷಜಂತು ಬರದಂತೆ ನೋಡಿಕೊಳ್ಳಲು ನಗರಸಭೆ ಸಿಬ್ಬಂದಿಗಳಿಗೆ ಸೂಚಿಸಿದರು ನಂತರ ಕಾಲೋನಿಗೆ ರಸ್ತೆ ಸಂಪರ್ಕ ಶೌಚಾಲಯ ಶುದ್ಧಕುಡಿಯುವ ನೀರಿನ ಘಟಕ ಉದ್ಯಾನವನ ಸ್ವಚ್ಛತೆ ಮಾಡಿಕೊಡಲಾಗುವುದೆಂದು ಭರವಸೆ ನೀಡಿದರು.

ನಂತರ ಈ ಕಾಲೋನಿ ಕೊನೆಯ ಭಾಗದಲ್ಲಿ ಇರುವುದರಿಂದ ಕುಡುಕರ ಪುಂಡ ಪೋಕರಿ ಅಡ್ಡವಾಗಿ ಮಾಡಿಕೊಂಡಿದ್ದಾರೆ ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳಲು ಸ್ಥಳದಲ್ಲಿದ್ದ ಗ್ರಾಮೀಣ ಪೊಲೀಸ್ ಠಾಣೆಯ ಎಎಸ್‌ಐ ಶಿವಪುತ್ರಪ್ಪ ಮತ್ತು ಮಕ್ಬುಲ್ ಅವರಿಗೆ ಈ ಕಾಲೋನಿಗೆ ಸಾಯಂಕಾಲ ರೌಂಡಿಅಗ್ ಮಾಡಲು ತಿಳಿಸಿದರು.

ಪಕ್ಕದಲ್ಲಿರು 80 ಫೀಟ್ ರೋಡ್ ಸುಧಾಹರಣೆಗೆ ಶಾಸಕರ ಗಮನಕ್ಕೆ ತರಲಾಗುವುದು ದೆಂದು ಹೇಳಿದರು ಕಾಲೋನಿಗೆ ಅಂಟಿಕೊಅಡಿರುವ ಮಿಲ್ ಗಳಿಂದ ದೂಳು ಮತ್ತು ಹೊಗೆಯಿಂದ ನಿವಾಸಿಗಳಿಗೆ ಉಸಿರಾಟದ ತೊಂದರೆ ಸೇರಿದಂತೆ ಅನೇಕ ಸಮಸ್ಯೆಗಳು ದಿನೆ ದಿನೆ ಹೆಚ್ಚಾಗುತ್ತಿದ್ದು. ಎಂದು ತಿಳಿಸಿದ ಹಿನ್ನಲೆಯಲ್ಲಿ ದಾಖಲೆಗಳನ್ನು ಪರಿಶೀಲಿಸಿ ರಸ್ತೆ ಒತ್ತುವರಿಯಾಗಿದ್ದು ಕಂಡು ಬಂದರೆ ತೆರವು ಗೊಳಿಸಿ ಸಂಚಾರ ಅನುಕೂಲ ಮಾಡಿ ಕೊಡುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಬದಲ್ಲಿ ನಗರ ಸಭೆ ಕಿರಿಯ ಆರೋಗ್ಯ ನಿರೀಕ್ಷಕರು ಶರಣಮ್ಮ, ಡಾ.ಎಸ್ ಎಸ್ ನಾಯಕ, ನಿಜಾಮುದ್ದಿನ್, ಭೀಮಾಶಂಕರ, ಪವನ್, ಮಾರೆಪ್ಪ, ಬಸವರಾಜ್, ಮಲ್ಲೇಶಿ ರಾಜಪ್ಪ, ರಾಜು, ಜೋಗಿ,ಅರ್ಜುನ್, ರಾಜು ಪೂಜಾರಿ, ಅಬ್ದುಲ್ ಸಮದ್, ರಾಜು ಪಾಟೀಲ್, ಅರ್ಜುನ್ ರಾಠೋಡ್, ಬಸವರಾಜ್ ಕುಂಬಾರ, ರಾಜು ಸೇರಿದಂತೆ ಅನೇಕ ಸಿಬ್ಬಂದಿ ಹಾಜರಿದ್ದರು.

# ನಗರದಲ್ಲಿ ಯಡಿಯೂರಪ್ಪ ಅಭಿಮಾನೋತ್ಸವ ಸಿದ್ದತಾ ಸಭೆ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಇಂದು ಈ ತಿಂಗಳ 9 ರಂದು ಚಿತ್ರದುರ್ಗದಲ್ಲಿ ನಡೆಯುವ ಮಾಜಿ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷಗಳ ರಾಜಕೀಯ ಜೀವನದ ಅಭಿಮಾನೋತ್ಸವ ಪೂರ್ವ ಸಿದ್ದತಾ ಸಭೆ ನಡೆಯಿತು.

ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಮಾಜಿ ಸಂಸದ ಸಣ್ಣ ಪಕ್ಕೀರಪ್ಪ, ಜಿಲ್ಲಾ ಬಿಜೆಪಿ ಅಧ್ಯಕ್ಷ ಅನಿಲ್ ನಾಯ್ಡು, ಮಾಜಿ ಅಧ್ಯಕ್ಷ ಗುತ್ತಿಗನೂರು ವಿರೂಪಾಕ್ಷಗೌಡ, ಬಿಚ್ಚುಗಲ್ಲು ಪಂಚಾಕ್ಷರಪ್ಪ ಮೊದಲಾದವರು ಅಭಿಮಾನೋತ್ಸವಕ್ಕೆ ಜಿಲ್ಲೆಯಿಂದ ಯಡಿಯೂರಪ್ಪ ಅವರ ಅಭಿಮಾನಿಗಳನ್ನು ಕರೆದುಕೊಂಡು ಹೋಗುವ ಕುರಿತು ಚರ್ಚೆ ನಡೆಸಿದರು.

ಈ ವೇಳೆ ಜಿಲ್ಲೆಯಲ್ಲಿನ ಯಡಿಯೂರಪ್ಪ ಅಭಿಮಾನಿಗಳ ಮತ್ತು ವೀರಶೈವ ಲಿಂಗಾಯತ ಸಮಾಜದ ಮುಖಂಡರುಗಳ ಸಭೆಯನ್ನು ನಾಳೆ ಸಂಜೆ. 5 ಕ್ಕೆ ನಗರದ ವೀರಶೈವ ವಿದ್ಯಾವರ್ಧಕ ಸಂಘದ ಸಭಾಂಗಣದಲ್ಲಿ ನಡೆಸಲು ನಿರ್ಧರಿಸಲಾಯ್ತು.

ಸಭೆಯಲ್ಲಿ ಮುಖಂಡರುಗಳಾದ, ಎಸ್.ಮಲ್ಲನಗೌಡ, ಶ್ರೀನಿವಾಸ್ ಮೋರ್ತ್ಕ, ಬಣಾಪುರ ನಾಗರಾಜಗೌಡ, ಕಪ್ಪಗಲ್ಲು ಶಿವರುದ್ರಪ್ಪ, ಹೊನ್ನನಗೌಡ, ನಡವಿ ವೀರನಗೌಡ, ಹಲಕುಂದಿ ವೀರನಗೌಡ, ಜಡೇಗೌಡ ಮೊದಲಾದವರು ಇದ್ದರು.

# ಮಹಿಳಾ ಡ್ರಿಗ್ರಿ ಕಾಲೇಜ್ ಪ್ರವೇಶ ಪ್ರಾರಂಭ

ಕನ್ನಡ ಮಾತೃ ಭೂಮಿ ವಾರ್ತೆ




**ಬಳ್ಳಾರಿ,**ನಗರದ ರೇಡಿಯೋ ಪಾರ್ಕ್ ಬಳಿ ಇರುವ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ 2026-27 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ ಎ, ಬಿ ಕಾಂ ಹಾಗೂ ಬಿ ಎಸ್ಸಿ ಪದವಿ ಪ್ರವೇಶಾತಿ ಪ್ರಾರಂಭವಾಗಿದೆಂದು ಕಾಲೇಜಿನ ಫ್ರಾಂಶುಪಾಲೆ ಪ್ರಜ್ಞಾ ಅವರು ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಉತ್ತಮ ಗುಣಮಟ್ಟದ ಶಿಕ್ಷಣದ ಜೊತೆಗೆ ನೈತಿಕತೆ, ಮೌಲ್ಯಗಳು, ಸಾಮಾಜಿಕ ಸಂಬಂಧಗಳ ನಿಭಾಯಿಸುವಿಕೆ, ಒತ್ತಡದಿಂದ ಹೊರಬರಲು ವಿದ್ಯಾರ್ಥಿಗಳಿಗೆ ತರಬೇತಿ ನೀಡುವುದರ ಮೂಲಕ ಪ್ರತಿ ಇಬ್ಬರು ವಿದ್ಯಾರ್ಥಿನಿಯರು ಇನ್ನಿಬ್ಬರು ವಿದ್ಯಾರ್ಥಿನಿಯರಿಗೆ ತರಬೇತಿ ನೀಡುವುದರ ಮೂಲಕ ಒತ್ತಡ ರಹಿತ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಅಣಿಗೊಳಿಸುವ ಸದುದ್ದೇಶವನ್ನು ಹೊಂದಿದೆ ಎಂದಿದ್ದಾರೆ.

## ...ಮೊದಲನೇ ಪುಟದಿಂದ

### ಅಸ್ಸಾಂ ಸಿಎಂ ಪತ್ನಿ ವಿರುದ್ಧ ಆರೋಪ: ಪವನ್ ಖೇರಾಗೆ ನಿರೀಕ್ಷಣಾ ಜಾಮೀನು ಮಂಜೂರು

ಮಂಜೂರು ಮಾಡಿತು. ಪತ್ರಿಕಾಗೋಷ್ಠಿಯೊಂದರಲ್ಲಿ ಮಾತನಾಡಿದ್ದ ಖೇರಾ ಅವರು, ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಪತ್ನಿ ರಿನಿಕಿ ಭುಯಾನ್ ಶರ್ಮಾ ಕುರಿತು ಅವರು ಗಂಭೀರ ಆರೋಪಗಳನ್ನು ಮಾಡಿದ್ದರು. ಬಹು ಪಾಸ್‌ಪೋರ್ಟ್ ಹೊಂದಿರುವುದು ಹಾಗೂ ವಿದೇಶಗಳಲ್ಲಿ ಘೋಷಿಸದ ಆಸ್ತಿ ಹೊಂದಿರುವ ಬಗ್ಗೆ ಹೇಳಿಕೆ ನೀಡಿದ್ದರು. ಈ ಹೇಳಿಕೆಗಳ ಆಧಾರವಾಗಿ ಅಸ್ಸಾಂ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ಏಪ್ರಿಲ್ 7ರಂದು ಪೊಲೀಸರು ಖೇರಾ ಅವರ ದೆಹಲಿ ನಿವಾಸಕ್ಕೆ ಭೇಟಿ ನೀಡಿದರೂ ಅವರು ಅಲ್ಲಿ ಇರಲಿಲ್ಲ. ಬಳಿಕ ಖೇರಾ ಅವರು ನಂತರ ಅವರು ತೆಲಂಗಾಣ ಹೈಕೋರ್ಟ್‌ನಲ್ಲಿ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಏಪ್ರಿಲ್ 10 ರಂದು ಜಾಮೀನು ದೊರೆತಿತ್ತು. ಬಳಿಕ ಪ್ರಕರಣದ ವಿರುದ್ಧ ಕಾನೂನು ಸಮರಕ್ಕೆ ಮುಂದಾಗಿದ್ದರು.

ಏಪ್ರಿಲ್ 15 ರಂದು, ಸುಪ್ರೀಂ ಕೋರ್ಟ್ ಅಸ್ಸಾಂ ಸರ್ಕಾರ ಸಲ್ಲಿಸಿದ ಮೇಲ್ಮನವಿಯ ಮೇರೆಗೆ ತೆಲಂಗಾಣ ಹೈಕೋರ್ಟ್ ಆದೇಶವನ್ನು ತಡೆಹಿಡಿಯಿತು ಮತ್ತು ನಂತರ ಏಪ್ರಿಲ್ 17 ರಂದು ನಿರೀಕ್ಷಣಾ ಜಾಮೀನು ಅವಧಿಯನ್ನು ವಿಸ್ತರಿಸಲು ನಿರಾಕರಿಸಿತು, ಅಲ್ಲದೆ, ಗುವಾಹಟಿ ಹೈಕೋರ್ಟ್‌ಗೆ ಸಂಪರ್ಕಿಸುವಂತೆ ನಿರ್ದೇಶಿಸಿತು.

ನಂತರ ಖೇರಾ ಅವರು ಗುವಾಹಟಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದರು, ಎಫ್‌ಐಆರ್ ರಾಜಕೀಯ ದ್ವೇಷದ ಪರಿಣಾಮವಾಗಿದೆ. ಪತ್ರಿಕಾಗೋಷ್ಠಿಯಲ್ಲಿ ನನ್ನ ಹೇಳಿಕೆಗಳನ್ನು ಸಾರ್ವಜನಿಕ ಮತ್ತು ರಾಜಕೀಯ ಸಂದರ್ಭದಲ್ಲಿ ಮಾಡಲಾಗಿದೆ ಎಂದು ವಾದಿಸಿದರು. ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲುಆರೋಪಗಳನ್ನು ಬಳಸಲಾಗಿದೆ ಎಂದು ಹೇಳಿದರು.

ಆದಾಗ್ಯೂ, ಏಪ್ರಿಲ್ 24 ರಂದು, ಗುವಾಹಟಿ ಹೈಕೋರ್ಟ್ ಅವರ ಅರ್ಜಿಯನ್ನು ತಿರಸ್ಕರಿಸಿತು, ಅಲ್ಲದೆ, ಕಸ್ಟಡಿ ವಿಚಾರಣೆ ಅಗತ್ಯ ಎಂದು ನಿರ್ದೇಶಿಸಿತು.

ಮುಖ್ಯಮಂತ್ರಿಗಳು ರಾಜಕೀಯ ಟೀಕೆಗಳ ಅಡಿಯಲ್ಲಿ ಬರಬಹುದಾದರೂ, ಸಾರ್ವಜನಿಕ ಹುದ್ದೆಯನ್ನು ಹೊಂದಿರದ ವ್ಯಕ್ತಿಯನ್ನು ವಿವಾದಕ್ಕೆ ಎಳೆದು ತರುವುದು ಸಮರ್ಥನೀಯವಲ್ಲ ಎಂದು ನ್ಯಾಯಾಲಯವು ತಿಳಿಸಿತು. ಇದರ ಬಳಿ ಖೇರಾ ಅವರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದು, ಇದೀಗ ಸುಪ್ರೀಂಕೋರ್ಟ್, ಗುವಾಹಟಿ ನ್ಯಾಯಾಲಯದ ಆದೇಶವನ್ನು ರದ್ದುಪಡಿಸಿ, ಖೇರಾ ಅವರಿಗೆ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

### ಪ್ಯಾರಾಮೆಡಿಕಲ್ ಕೋರ್ಸ್ ಸೇರಲು ಅವಕಾಶ ಕಲ್ಪಿಸಿದ ಹೈಕೋರ್ಟ್

ಇದಕ್ಕೂ ಮುನ್ನ ನಡೆದ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನ್ಯಾಷನಲ್ ಹೆಲ್ತ್ ಪ್ರೊಫೆಷನ್ ಅಲೈಡ್ ಆಕ್ಟ –2021ರಲ್ಲಿ (ಎನ್‌ಸಿಎಎಚ್‌ಪಿ) ಕಾಯಿದೆ ಜಾರಿ ಮಾಡಿದ್ದು, ಪ್ಯಾರಾಮೆಡಿಕಲ್ ಕೋರ್ಸ್‌ಗೆ ಪದವಿಪೂರ್ವ ಶಿಕ್ಷಣದಲ್ಲಿ ವಿಜ್ಞಾನ ವಿಭಾಗದಲ್ಲಿ ಅಧ್ಯಯನ ಮಾಡಿರಬೇಕು ಎಂದು ತಿಳಿಸಿತ್ತು.

2021ರಲ್ಲಿ ಕಾಯಿದೆ ಜಾರಿ ಮಾಡಿದ್ದರೂ ಅದನ್ನು ಹಂತ ಹಂತವಾಗಿ ಅನುಷ್ಠಾನ ಮಾಡಲಾಗುತ್ತಿತ್ತು. ಈವರೆಗೂ ಪಠ್ಯಕ್ರಮದಲ್ಲಿ ಬದಲಾವಣೆ ಮಾಡಲಾಗುತ್ತಿತ್ತು. ಪ್ರಸಕ್ತ ವರ್ಷದಿಂದ ಪ್ಯಾರಾಮೆಡಿಕಲ್‌ಗೆ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣರಾಗಿರಬೇಕು ಎಂದು ತಿಳಿಸಲಾಗಿದೆ. ಆದ್ದರಿಂದ ಈ ಹಿಂದೆ ಇದ್ದ ನಿಯಮಗಳಂತೆ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೂ ಅವಕಾಶ ನೀಡಬೇಕು ಎಂದು ಕೋರಿದ್ದರು. ವಾದ ಆಲಿಸಿದ ಪೀಠ ಈ ಆದೇಶ ನೀಡಿದೆ.

### ರಾಹುಲ್ ಗಾಂಧಿಗೆ ಅಲಹಾಬಾದ್ ಹೈಕೋರ್ಟ್‌ನಿಂದ ಬಿಗ್ ರಿಲೀಫ್..!

ನ್ಯಾಯಾಲಯ ತಿರಸ್ಕರಿಸಿತ್ತು.

ಈ ಆದೇಶ ಪ್ರಶ್ನಿಸಿ ಸಿಮ್ರಾನ್ ಗುಪ್ತಾ ಸಲ್ಲಿಸಿದ್ದ ಅರ್ಜಿಯನ್ನು ಆಲಿಸಿದ ನಂತರ ನ್ಯಾಯಮೂರ್ತಿ ವಿಕ್ರಮ್ ಡಿ ಚೌಹಾಣ್ ಈ ಆದೇಶ ನೀಡಿದ್ದಾರೆ. 2025 ರಲ್ಲಿ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಕಚೇರಿಯ ಉದ್ಘಾಟನೆಯ ಸಂದರ್ಭದಲ್ಲಿ ಟನಾವು ಈಗ ಬಿಜೆಪಿ, ಆರ್‌ಎಸ್‌ಎಸ್ ಮತ್ತು ಭಾರತ ರಾಷ್ಟ್ರದ ವಿರುದ್ಧವೇ ಹೋರಾಡುತ್ತಿದ್ದೇವೆಟಿ ಎಂದು ರಾಹುಲ್ ಗಾಂಧಿ ಹೇಳಿದ್ದರು ಎಂದು ಅರ್ಜಿದಾರರು ಆರೋಪಿಸಿದ್ದರು. ಈ ಹೇಳಿಕೆಯು ಸಾರ್ವಜನಿಕ ಭಾವನೆಗಳಿಗೆ ನೋವುಂಟು ಮಾಡಿದೆ. ದೇಶವನ್ನು ಅಸ್ಥಿರಗೊಳಿಸುವ ಉದ್ದೇಶದಿಂದ ಮಾಡಲಾದ ದೇಶದ್ರೋಹ ಮತ್ತು ರಾಷ್ಟ್ರವಿರೋಧಿ ಹೇಳಿಕೆಯಾಗಿದೆ ಎಂದು ಅರ್ಜಿದಾರರು ದೂರಿನಲ್ಲಿ ಉಲ್ಲೇಖಿಸಿದ್ದರು.

### ಮಹಾನಗರ ಪಾಲಿಕೆ ಚುನಾವಣೆ ಮುಂದಿನ ಮೂರು ತಿಂಗಳಲ್ಲಿ ನಡೆಸಲು ಕಲ್ಬುರ್ಗಿ ಹೈಕೋರ್ಟ ಆದೇಶ

ದೊರೆಯದೇ ಹೋಗಿದೆ ಎಂದು ಸದಸ್ಯರು ವಾದ ಮಂಡಿಸಿದ್ದರು. ಅವಧಿಯನ್ನು ಮುಂದುವರೆಸಲು ಅವಕಾಶ ಇರದೇ ಇರುವರಿಂದ ಮುಂದಿನ ಮೂರು ತಿಂಗಳಲ್ಲಿ ಚುನಾವಣಾ ಪ್ರಕ್ರಿಯೆ ನಡೆಸುವಂತೆ ಆದೇಶ ನೀಡಿದೆ. ಮಹಾನಗರದ ಪಾಲಿಕೆ ಚುನಾವಣೆ ಕ್ಷೇತ್ರ ಪುನರ್ ವಿಗಂಡನೆ ಪ್ರಕ್ರಿಯೆಗಳು ಜಾರಿಯಲ್ಲಿರುವಾಗ ಮೂರು ತಿಂಗಳಲ್ಲಿ ಚುನಾವನೆ ನಡೆಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ ನಿರ್ದೇಶನ ನೀಡಿದ್ದರಿಂದ ಚುನಾವಣೆ ಪ್ರಕ್ರಿಯೆ ನಡೆಸುವ ಒತ್ತಡಕ್ಕೆ ಸರ್ಕಾರ ಸಿಲುಕಿದಂತಾಗಿದೆ.

### ಬುದ್ಧಪೂರ್ಣಿಮೆ: ಭಾವಚಿತ್ರದ ಮೆರವಣಿಗೆ, ಸ್ಮರಣೆ-ಗಣ್ಯರಿಂದ ನಮನ

ಅಧಿಕಾರಿ ಈಶ್ವರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪಾತ್ರ, ಎಡಿಸಿ ಶಿವಾನಂದ ಭಜಂತ್ರಿ, ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ, ಡಾ.ನರಸಿಂಹಲು ನಂದಿನಿ, ಬಸವರಾಜ, ಕೆ.ಇ.ಕುಮಾರ, ಶ್ರೀನಿವಾಸ ಮಾರ್ಚಲಾ, ಶೇಖರ ರಾಂಪೂರು, ರವಿದಾದಾಸ್, ಮಾರೆಪ್ಪ, ಛಲವಾದಿ ಮಹಾಸಭಾ ನಿರ್ದೇಶಕ ಎಂ.ವಸಂತ, ತಿಮ್ಮಾರೆಡ್ಡಿ, ವಿಶ್ವನಾಥ ಪಟ್ಟಿ, ಆಂಜಿನೇಯ್ಯ ಕೊಂಬಿನ್, ದಂಡಪ್ಪ ಬಿರಾದಾರ ಸೇರಿದಂತೆ ಅನೇಕರಿದ್ದರು.

### ಕಾರ್ಮಿಕರ ದಿನಾಚರಣೆ: ಸಿಐಟಿಯುನಿಂದ ರ‍್ಯಾಲಿ : ಸಂಘಟಿತ ಹೋರಾಟಕ್ಕೆ ಕರೆ

ಒತ್ತಾಯಿಸಿ ಜಿಲ್ಲಾ ಕೇಂದ್ರಗಳಲ್ಲಿ ನಡೆಯುವ ಪಿಕೆಟಿಂಗ್ ಕಾರ್ಯಕ್ರಮಕ್ಕೆ ಕಾರ್ಮಿಕರು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕರೆ ನೀಡಿದರು.

ಪ್ರಸ್ತಾವಿಕವಾಗಿ ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ಎಸ್. ಶರಣಬಸವ ಮಾತಾನಾಡಿದರು. ಕಾರ್ಮಿಕ ದಿನಾಚರಣೆಯಲ್ಲಿ ಮುಖ್ಯ ಅತಿಥಿಗಳಾಗಿ ವಿಮಾನೌಕರರ ಸಂಘದ ಮುಖಂಡರಾದ ಎಮ್. ಶರಣಗೌಡ, ಎಂ. ರವಿ, ಕೆ.ಪಿ.ಆರ್.ಎಸ್.ನ. ಜಿಲ್ಲಾ ಉಪಾಧ್ಯಕ್ಷ ಕೆ.ಜಿ. ವಿರೇಶ, ಔಷಧಿ ಪ್ರತಿನಿಧಿಗಳ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಗುರುರಾಜ ದೇಸಾಯಿ ಶುಭ ಕೋರಿ ಮಾತಾನಾಡಿದರು.

ಕಾರ್ಯಕ್ರಮದಲ್ಲಿ ಸಿ.ಐ.ಟಿ.ಯು. ಮುಖಂಡರಾದ ಭಾಸ್ಕರ, ಜಿಲ್ಲಾನಿ ಪಾಷ್, ತೋಟಯ್ಯ ವೀರಭದ್ರ ಸುರಾನ, ಪೌಲ್ ಪ್ರಸಾದ್, ಖಾದರ್ ಅಹ್ಮದ್, ನಾಗೇಂದ್ರ , ಗಂಗಮ್ಮ, ನಿರ್ಮಲಾ, ಜಂಬಣ್ಣ ಸೇರಿದಂತೆ ಕಾರ್ಮಿಕರು ಭಾಗವಹಿಸಿದ್ದರು. ಬಹಿರಂಗ ಸಭೆಯ ನಂತರ ನಗರದ ಪ್ರಮುಖ ಬೀದಿಗಳಲ್ಲಿ ಕಾರ್ಮಿಕರ ರ‍್ಯಾಲಿ ನಡೆಯಿತು.

### ಕಾರ್ಮಿಕರ ಹಕ್ಕುಗಳ ಮೇಲೆ ನೇರ ದಾಳಿ ವಿರುದ್ಧ ಹೋರಾಡಿ-ಸೋಮಶೇಖರ

ಮಾಲೀಕರ ಪಾದಸೇವೆ ಮಾಡಲು ಟೊಂಕ ಕಟ್ಟಿ ನಿಂತಿದೆ. ಇನ್ನೊಂದೆಡೆ ಆಶಾ, ಅಂಗನವಾಡಿ ಹಾಗೂ ಬಿಸಿಯೂಟ ಕಾರ್ಮಿಕರ ಬಗ್ಗೆ ಸಹ ವೇತನ ಹೆಚ್ಚಿಸುವ ಗೊಡವೆಗೆ ಹೋಗದೆ, ಅವರನ್ನು ತೀವ್ರ ಶ್ರಮಶೋಷಣೆಗೆ ಗುರಿ ಮಾಡಲಾಗಿದೆ ಎಂದರು.

ಮಹೇಶ್ ಚೀಕಲಪರ್ವಿ ಅವರು ಮಾತನಾಡಿದರು. ವಸತಿ ನಿಲಯ ಕಾರ್ಮಿಕರ ಸಂಘ ಗಾಯಿತ್ರಿ, ಸುರೇಶ್, ಹುಲಿಗೆಪ್ಪ,, ಶಿಲ್ಪಾ ಯೂನಿಯನ್ ನರಸಪ್ಪ ಸಲೀಂ, ಯಲ್ಲಪ್ಪ ನಾಮಾಲಿ, ಅಣ್ಣಪ್ಪ, ಮುಂತಾದವರು ವೇದಿಕೆ ಮೇಲೆ ಇದ್ದರು. ಆಶಾ ಕಾರ್ಯಕರ್ತರು, ಶಿಲ್ಪಾ, ರಾಯ್ಕೆಮ್, ಟ್ರೈಮ್ಯಾಕ್ಸ್, ಐಐಟಿ ಯೂನಿಯನ್ ನ ಪದಾಧಿಕಾರಿಗಳು ಕಾರ್ಮಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಬುದ್ಧ ಜಯಂತಿ: ಬುದ್ಧ ಮಾರ್ಗದಲ್ಲಿ ನಡೆದಾಗ ಜೀವನ ಸಾರ್ಥಕತೆ-ಡಾ.ಹಂಪಣ್ಣ ಸಜ್ಜನ

ಜೀವಿಗಳಿಗೂ ಸಹಾನುಭೂತಿ ತೋರಿಸುವದಾಗಿದೆ. ಸಾಮಾನ್ಯ ಜನರ ಜೊತೆಗೆ ಅವರು ಜೀವನ ನಡೆಸಿದರು ಎಂದರು.

ಭಗವಾನ್ ಬುದ್ಧರು ತಮ್ಮ ತತ್ವ ಮತ್ತು ಸಿದ್ಧಾಂತಗಳ ಬಗ್ಗೆ ಜಾಗೃತಿ ಮೂಡಿಸಿದ ಮಹಾನ್ ವ್ಯಕ್ತಿಯಾಗಿದ್ದು, ಅವರ ಜ್ಞಾನಮಾರ್ಗ ಅನುಸರಿಸಿ ನಮ್ಮೊಳಗೆ ಜಾಗೃತಿ ಮೂಡಿಸಿಕೊಂಡು ಸಮಾಜವನ್ನು ಸುಧಾರಣೆ ಮಾಡುವಲ್ಲಿ ನಾವೆಲ್ಲರು ಶ್ರಮಿಸಬೇಕು ಎಂದರು.

ಇದಕ್ಕೂ ಮೊದಲು ಮಹಾನಗರ ಪಾಲಿಕೆ ಉಪ ಆಯುಕ್ತ ಶರಣಪ್ಪ ಸತ್ಯಂಪೇಟ ಮಾತನಾಡಿ, ಭಗವಾನ್ ಬುದ್ಧರು ತಮ್ಮ ಜ್ಞಾನದ ಮೂಲಕ ಇಡೀ ಜಗತ್ತನ್ನು ಬೆಳಗಿಸಿದ್ದಾರೆ. ಅನೇಕ ಜನರು ಬುದ್ಧರ ಹಾದಿಯಲ್ಲಿ ನಡೆದು ಉತ್ತಮ ಜೀವನವನ್ನು ಕಂಡುಕೊಂಡಿದ್ದಾರೆ. ಅಶೋಕ ಸಾಮ್ರಾಟ, ಡಾ.ಬಿ.ಆರ್.ಅಂಬೇಡ್ಕರ್ ಅವರೂ ಕೂಡ ಬುದ್ಧರ ಸಂದೇಶಗಳನ್ನು ಮೆಚ್ಚಿ ಬೌದ್ಧ ಧರ್ಮವನ್ನು ಸ್ವೀಕರಿಸಿದ್ದಾರೆ. ಇದರಂತೆ ಅಸಂಖ್ಯಾತ ಜನರು ಪ್ರೇರಿತರಾಗಿದ್ದಾರೆ. ಬುದ್ಧರು ಅಷ್ಠಾಂಗ ಮಾರ್ಗಗಳನ್ನು ಪಂಚಶೀಲ ತತ್ವಗಳನ್ನು ನೀಡಿದ್ದಾರೆ. ಅವುಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾ ರಸ್ವಾಮಿ ಅವರು ಮಾತನಾಡಿ, ಮನುಷ್ಯನಿಗೂ ಸಾವಿದೆ ಎಂದು ತಿಳಿದವನ್ನು ಯಾರಿಗೂ ತೊಂದರೆ ಕೊಡುವುದಿಲ್ಲ. ಬೇರೆ ಅವರಿಗೆ ತೊಂದರೆ ಕೊಡದೆ ಕೊಡದಿದ್ದರೆ. ಶಾಂತಿ ತನ್ನಷ್ಟಕ್ಕೆ ತಾನೆ ನೆಲೆಸುತ್ತದೆ. ಎಲ್ಲರೂ ಒಂದಾಗಿ ಹೋಗಬೇಕು. ಜೀವನದಲ್ಲಿ ಶಾಂತಿ ಬೇಕಾದರೆ ಗೌತಮ ಬುದ್ಧರ ಅಷ್ಟಾಂಗ ಮಾರ್ಗವನ್ನು ಅನುಸರಿಸಬೇಕು ಎಂದರು.

ಈ ಸಂದರ್ಭದಲ್ಲಿ ಪ್ರಮುಖರಾದ ಮಲ್ಲೇಶ ಕೊಲಿಮಿ, ಗೌತಮ ಕಟ್ಟಿಮನಿ, ಶ್ರೀನಿವಾಸ ಮಾಚರ್ಲಾ, ದಮ್ಮಾಚಾರ್ ನರಸಿಂಹಲು, ಆರ್.ತಿಮ್ಮಾರೆಡ್ಡಿ ಸೇರಿ ಅನೇಕರಿದ್ದರು.

# ಮಲೆ ಮಹದೇಶ್ವರ ಬೆಟ್ಟದ ರಸ್ತೆಯಲ್ಲಿ ಬಸ್ ಪಲ್ಟಿ
# 30ಕ್ಕೂ ಹೆಚ್ಚು ಮಂದಿಗೆ ಗಾಯ

**ಚಾಮರಾಜನಗರು,ಮೇ.1-**ನಿಯಂತ್ರಣ ತಪ್ಪಿದ ಕೆಎಸ್‌ಆರ್‌ಟಿಸಿ ಬಸ್ ಪಲ್ಟಿಯಾಗಿದ್ದು, 30ಕ್ಕೂ ಅಧಿಕ ಮಂದಿ ಪ್ರಯಾಣಿಕರು ಗಾಯಗೊಂಡ ಘಟನೆ ಹನೂರು ತಾಲೂ ಕಿನ ಮಲೆ ಮಹದೇಶ್ವರ ಬೆಟ್ಟ ರಸ್ತೆಯ ತಾಳು ಬೆಟ್ಟದ ತಿರುವಿನಲ್ಲಿ ಇಂದು ನಡೆ ಯಿತು.





ಮಲೆ ಮಹದೇಶ್ವರ ಬೆಟ್ಟದಿಂದ ಕೊಳ್ಳೇಗಾಲ ದತ್ತ ತೆರಳುತ್ತಿದ್ದ ಕೆಎ-09 ಎಫ್-5415 ಬಸ್ ತಾಳುಬೆಟ್ಟದ ತಿರುವಿನಲ್ಲಿ ತಡೆಗೋಡೆಯ ಬಳಿ ಪಲ್ಟಿಯಾಗಿದೆ. ಬಸ್‌ನಲ್ಲಿದ್ದ 50 ಮಂದಿ ಪ್ರಯಾಣಿಕರಲ್ಲಿ 30ಕ್ಕೂ ಅಧಿಕ ಮಂದಿಗೆ ಗಾಯಗಳಾಗಿದ್ದು, ಬಹುತೇಕರಿಗೆ ಗಂಭೀರ ಸ್ವರೂಪದ ಪೆಟ್ಟುಗಳಾಗಿವೆ ಎಂದು ತಿಳಿದು ಬಂದಿದೆ.

ಬಸ್ ನಿರ್ವಾಹಕಿ ಪದ್ಮಾವತಿ ಅವರಿಗೆ ತಲೆಗೆ ತೀವ್ರ ಗಾಯವಾಗಿದೆ. ಪ್ರಯಾಣಿ ಕರಾದ ಮೈಸೂರಿನ ದಾಕ್ಷಾಯಿಣಿ, ಸಿದ್ದಯ್ಯನ ಪುರದ ಸುಂದ್ರಮ್ಮ ಬಸವರಾಜು ಎಂಬವರಿಗೂ ತೀವ್ರ ಪೆಟ್ಟಾಗಿದೆ. ಗಾಯಗೊಂಡ ಎಲ್ಲ ಪ್ರಯಾಣಿಕರಿಗೂ ಕೌದಳ್ಳಿ, ಹನೂರು ಮತ್ತ್ ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾ ಗುತ್ತಿದೆ.

ಹುಣ್ಣಿಮೆ ಹಿನ್ನೆಲೆಯಲ್ಲಿ ವಾಹನ ದಟ್ಟಣೆಯೂ ಅಧಿಕವಾಗಿದ್ದ ಕಾರಣ ಹತ್ತಾರು ವಾಹನಗಳು ಸಾಲುಗಟ್ಟಿ ನಿಂತು ಟ್ರಾಫಿಕ್ ಜಾಮ್ ಉಂಟಾಗಿತ್ತು. ಪೊಲೀಸರು ಸ್ಥಳಕ್ಕಾಗಮಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಚಾಲಕನ ಅತಿವೇಗ ಮತ್ತ್ ಅಜಾಗರೂಕತೆಯಿಂದ ಅವಘಡ : ಕೊಳ್ಳೇಗಾಲ ಆಸ್ಪತ್ರೆಯಲ್ಲಿ 25 ಮಂದಿ ಚಿಕಿತ್ಸೆ ಪಡೆಯುತ್ತಿದ್ದು, ಗಾಯಾಳುಗಳು ಬಸ್ ಚಾಲಕನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ತಿರುವಿನಲ್ಲಿ ಉರುಳುತ್ತಿದ್ದಂತೆ ಚಾಲಕ ಬಸ್ಸಿನಿಂದ ಜಿಗಿದು ಪರಾರಿಯಾಗಿದ್ದಾನೆ. ಆರಂಭದಿಂದಲೂ ತುಂಬಾ ವೇಗವಾಗಿ ಬಸ್ ಚಾಲನೆ ಮಾಡುತ್ತಿದ್ದ. ಈ ಬಗ್ಗೆ ಎಚ್ಚರಿ ಸಿದರೂ ಕಿವಿಗೊಡಲಿಲ್ಲ. ಅತಿವೇಗ ಮತ್ತ್ ಅಜಾಗರೂಕತೆಯಿಂದ ಅವಘಡ ಉಂಟಾಗಿದೆ ಎಂದು ಗಾಯಾಳುಗಳು ತಿಳಿಸಿದರು.

ಎರಡು ದಿನಗಳ ಹಿಂದೆ ಉಡುಪಿಯಲ್ಲಿ ಭೀಕರ ಅಪಘಾತ: ಕಾಲೇಜು ಪ್ರವಾಸ ಹೊರಟಿದ್ದ ಬಸ್ ರಸ್ತೆ ಬದಿ ನಿಂತಿದ್ದ ಟ್ಯಾಂಕರ್ ಮತ್ತು ಲಾರಿಗೆ ಡಿಕ್ಕಿ ಹೊಡೆದು ಮೂವರು ಮ ೃತಪಟ್ಟ ಘಟನೆ ಉಡುಪಿ ಜಿಲ್ಲೆಯ ಬೈಂದೂರಿನ ತ್ರಾಸಿಯ ಮರವಂತೆ ಬೀಚ್ ಬಳಿ ಬುಧವಾರ ಮಧ್ಯಾಹ್ನ ಸಂಭವಿಸಿತ್ತು.

ಶಿವಮೊಗ್ಗ ಜಿಲ್ಲೆಯ ಶಂಕರಘಟ್ಟ ರಂಭಾಪುರಿ ಕಾಲೇಜಿನ ಅಂತಿಮ ಹಂತದ ಬಿ.ಕಾಂ ವಿದ್ಯಾರ್ಥಿಗಳು ಎರಡು ದಿನಗಳ ಹಿಂದೆ ಪ್ರವಾಸಕ್ಕೆ ಹೊರಟಿದ್ದು, ಬಸ್ಸಿನಲ್ಲಿ 24 ವಿದ್ಯಾರ್ಥಿಗಳು, 23 ವಿದ್ಯಾರ್ಥಿನಿಯರು ಸೇರಿದಂತೆ ಒಟ್ಟು 50 ಮಂದಿ ಇದ್ದರು. ಇವರೆಲ್ಲರೂ ಮುರ್ಡೇಶ್ವರಕ್ಕೆ ತೆರಳಿದ್ದು, ಅಲ್ಲಿಂದ ಬೆಳಗ್ಗೆ ಉಡುಪಿ ಕಡೆ ಬಸ್‌ನಲ್ಲಿ ಬರುತ್ತಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿದ ಬಸ್, ರಸ್ತೆ ಬದಿ ನಿಲ್ಲಿಸಿದ ಗ್ಯಾಸ್ ಟ್ಯಾಂಕರ್‌ಗೆ ಡಿಕ್ಕಿ ಹೊಡೆದಿತ್ತು. ಬಳಿಕ ಅಲ್ಲೇ ಮುಂದೆ ನಿಲ್ಲಿಸಿದ ಗೂಡ್ಸ್ ಲಾರಿಗೂ ಡಿಕ್ಕಿಯಾಗಿತ್ತು.

# ಸುಪ್ರೀಂಕೋರ್ಟ್‌ನಲ್ಲಿ ಬಾಕಿಯಿರುವ ಪ್ರಕರಣಗಳ ಇತ್ಯರ್ಥಕ್ಕೆ ಸಮಾಧಾನ ಸಮಾರೋಹ ವಿಶೇಷ ಲೋಕ ಅದಾಲತ್

**ಬೆಂಗಳೂರು,ಏ.1-**ಸುಪ್ರೀಂಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯ ರ್ಥಪಡಿಸಿಕೊಳ್ಳಲು ಸಮಾಧಾನ ಸಮಾರೋಹ- 2026 ಎಂಬ ವಿಶೇಷ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ.




ಹೈಕೋರ್ಟನ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯ ನಿರ್ವಾಹಕ ಅಧ್ಯಕ್ಷ ಅನು ಸಿವರಾಮನ್ ಮತ್ತು ಹೈಕೋರ್ಟ್ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ಆರ್.ದೇವದಾಸ್ ಅವರು ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಆಗಸ್ಟ್ 21ರಿಂದ ಮೂರು ದಿನಗಳ ಕಾಲ ನಡೆಯುವ ವಿಶೇಷ ಲೋಕ ಅದಾಲತ್‌ನಲ್ಲಿ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು 4,328 ಪ್ರಕರಣಗಳನ್ನು ಗುರುತಿಸಲಾಗಿದೆ. ಅದೇ ರೀತಿಯಲ್ಲಿ ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ತಾಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ಕಾನೂನು ಸೇವೆಗಳ ಪ್ರಾಧಿಕಾರ ಸಂಪರ್ಕಿಸುವ ಮೂಲಕ ಸಾರ್ವಜನಿಕರು ತಮ್ಮ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ನೋಂದಣಿ ಮಾಡಿಕೊಳ್ಳಬಹುದಾಗಿದೆ. ಆಯ್ಕೆಯಾದ ವ್ಯಾಜ್ಯಗಳನ್ನು ನೋಂದಾಯಿತ ಕಾನೂ ನು ಸಮನ್ವಯಕರ ಮಧ್ಯಸ್ಥಿಕೆಯಲ್ಲಿ ತಾವಿರುವ ತಾಲೂ ಕು ಮತ್ತು ಜಿಲ್ಲಾಮಟ್ಟದಲ್ಲಿಯೇ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಸುಪ್ರೀಂಕೋರ್ಟ್ ಪ್ರಮುಖವಾಗಿ ಬ್ಯಾಂಕಿಂಗ್ ಮತ್ತು ವಿಮಾ ಸಂಬಂಧಿತ ಪ್ರಕರಣಗಳು, ನಾಗರೀಕ ಕಾನೂನು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ಗ್ರಾಹಕ ವ್ಯಾಜ್ಯಗಳು ಮತ್ತು ರೇರಾ, ಕ್ರಿಮಿನಲ್ ಪ್ರಕರಣಗಳು, ಕೌಟುಂಬಿಕ ವಿವಾದಗಳು, ಕಾರ್ಮಿಕ ಮತ್ತು ಕೈಗಾರಿಕಾ ಕಾನೂನುಗಳು ವಿವಾದಗಳು, ಭೂಸ್ವಾಧೀನ ಮತ್ತು ಪುನರ್ವಸತಿ, ಆಸ್ತಿ ತೆರಿಗೆ, ಬಾಡಿಗೆ ನಿಯಂತ್ರಣ ಮತ್ತು ಸಾರ್ವಜನಿಕ ಆವರಣ (ತೆರವುಗೊಳಿಸುವಿಕೆ) ಕಾಯ್ದೆ, ವರ್ಗಾವಣೆ ಅರ್ಜಿಗಳು ಮತ್ತು ಸೇವಾ ಕಾನೂನುಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಇತ್ಯರ್ಥಕ್ಕೆ ಗುರುತಿಸಲಾಗಿದೆ.

ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು 4,328 ವಿಚಾರಣೆಗೆ ಬಾಕಿ ಇರುವ ಪ್ರಕರಣಗಳನ್ನು ಸಂಧಾನಕ್ಕಾಗಿ ಗುರುತಿಸಲಾಗಿದ್ದು ಅದರಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂದರೆ 1,245, ಬೆಳಗಾವಿ 517, ಕಲಬುರಗಿ 269, ವಿಜಯಪುರ 213, ಧಾರವಾಡ 188, ಬಾಗಲಕೋಟೆ 159, ಗದಗ 125, ಬಳ್ಳಾರಿ 109, ತುಮಕೂರು 101, ಕೊಪ್ಪಳ 98, ಹಾವೇರಿ 81, ಉಡುಪಿ 78, ಬೀದರ್ 77, ದಕ್ಷಿಣ ಕನ್ನಡ 75, ಶಿವಮೊಗ್ಗ 69, ರಾಯಚೂರು 69, ಚಿತ್ರದುರ್ಗ 58, ಮೈಸೂರು 56, ದಾವಣಗೆರೆ 47, ಉತ್ತರ ಕನ್ನಡ 35, ಮಂಡ್ಯ 30, ಚಿಕ್ಕಮಗಳೂರು 27, ಹಾಸನ 24, ಬೆಂಗಳೂರು ಗ್ರಾಮಾಂತರ 18, ರಾಮನಗರ 17, ಚಿಕ್ಕಬಳ್ಳಾಪುರ 17, ಕೊಡಗು 15, ಯಾದಗಿರಿ 14 ಮತ್ತು ಚಾಮರಾಜನಗರ ಜಿಲ್ಲೆಯ 4 ಪ್ರಕರಣಗಳು ಒಳಗೊಂಡಿವೆ.

ಸುಪ್ರೀಂಕೋರ್ಟ್ ಈಗಾಗಲೇ ಗುರುತಿಸಲಾದ ಪ್ರಕರಣಗಳಲ್ಲಿ 937ಕ್ಕೂ ಹೆಚ್ಚು ಪ್ರಕರಣಗಳು ಸರ್ಕಾರವು ಪಕ್ಷವಾಗಿರುವ ಪ್ರಕರಣಗಳಾಗಿವೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಸಕಾರಾತ್ಮಕವಾಗಿ ಸ್ಪಂದಿಸಲು ಮತ್ತು ಪ್ರಕರಣಗಳ ಇತ್ಯರ್ಥಕ್ಕೆ ಮುಂದಾಗುವಂತೆ ಮಾನ್ಯ ಅಡ್ವೊಕೇಟ್ ಜನರಲ್ ಅವರೊಂದಿಗೆ ಈಗಾಗಲೇ ಸಮಾಲೋಚನೆ ನಡೆಸಲಾಗಿದೆ ಎಂದು ನ್ಯಾಯಮೂರ್ತಿಗಳು ತಿಳಿಸಿದರು.

ನ್ಯಾಯಮೂರ್ತಿ ಆರ್.ದೇವದಾಸ್ ಮಾತನಾಡಿ, ಈ ವಿಶೇಷ ಲೋಕ ಅದಾಲತ್ ಜನಸಾಮಾನ್ಯರಿಗೆ ತಮ್ಮ ಕಾನೂನು ಹೋರಾಟವನ್ನು ತ್ವರಿತವಾಗಿ ಮತ್ತು ಕಡಿಮೆ ವೆಚ್ಚದಲ್ಲಿ ಮುಗಿಸಿಕೊಳ್ಳಲು ಸಿಕ್ಕಿರುವ ಮಹತ್ವದ ಅವಕಾಶವಾಗಿದೆ. ಇದರಿಂದ ಸಮಯ ಮತ್ತು ಹಣ ಉಳಿತಾಯವಾಗುವುದಲ್ಲದೆ, ಉಭಯ ಪಕ್ಷಗಳ ನಡುವೆ ಸೌಹಾರ್ದ ಸಂಬಂಧ ಉಳಿಯಲು ಸಹಕಾರಿಯಾಗಲಿದೆ. ಸಾರ್ವಜನಿಕರು ಈ ಅದಾಲತ್ ಪ್ರಯೋಜನ ಪಡೆಯುವಂತೆ ಮನವಿ ಮಾಡಿದರು.

ಆಸಕ್ತ ಕಕ್ಷಿದಾರರು ಅಥವಾ ಅವರ ವಕೀಲರು ಸರ್ವೋಚ್ಚ ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ನೀಡಲಾದ ಗೂಗಲ್ ಫಾರ್ಮ್ ಲಿಂಕ್ **https://forms.gle/jqxefqF4BCWzukoP6** ಮೂಲಕ ಮೇ 31ರೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ನೋಟಿಸ್ ಪಡೆದ ಕಕ್ಷಿದಾರರು ತಾವಿರುವ ಜಿಲ್ಲಾ ಅಥವಾ ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರದ ಮುಂದೆ ಖುದ್ದಾಗಿ ಅಥವಾ ವಿಡಿಯೋ ಕಾನ್ಫರೆನ್ಸ್ ಮೂಲಕ ಪೂರ್ವ ಸಂಧಾನ ಸಭೆಗಳಿಗೆ ಹಾಜರಾಗಬಹುದು ಎಂದು ಹೇಳಿದರು.

## ಖರ್ಗೆ ಅವರು ಬದಲಾವಣೆ ಇಲ್ಲ ಎಂದಿರುವಾಗ ಎಲ್ಲಾ ಫುಲ್ ಸ್ಟಾಪ್ ಅಂತ ಅರ್ಥ-ಸಚಿವ ಪರಮೇಶ್ವರ್

**ಬೆಂಗಳೂರು,ಏ.1-**ಮಲ್ಲಿಕಾರ್ಜುನ ಖರ್ಗೆ ಅವರು ಬದಲಾವಣೆ ಇಲ್ಲ ಎಂದಿರುವಾಗ ಎಲ್ಲ ಫುಲ್ ಸ್ಟಾಪ್ ಅಂತ ಅರ್ಥ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ತಿಳಿಸಿದ್ದಾರೆ.

ಸದಾಶಿವನಗರದ ನಿವಾಸದ ಬಳಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸದ್ಯಕ್ಕೆ ಬದಲಾವಣೆ ಇಲ್ಲ ಎಂಬ ಖರ್ಗೆ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಖರ್ಗೆಯವರು ನಮ್ಮ ಪಕ್ಷದ ರಾಷ್ಟ್ರೀಯ ಅಧ್ಯಕ್ಷರು. ಅಪಾರವಾದ ಅನುಭವ ಇರುವವರು. ರಾಜ್ಯಕ್ಕೆ ಬದಲಾವಣೆ ಆಗೋದಾದ್ರೆ, ಅವರು ಬಂದರೆ ಅವರ ಅನುಭವದ ಮುಂದೆ ಮಾತಾಡೋಕೆ ಆಗಲ್ಲ. ಸದ್ಯಕ್ಕೆ ಸಿಎಂ ಇದ್ದಾರೆ, ಮತ್ತೆ ಬದಲಾವಣೆ ಮಾಡುವ ಪ್ರಶ್ನೆ ಈಗಂತೂ ಸದ್ಯಕ್ಕೆ ಇಲ್ಲ ಎಂದು ಖರ್ಗೆ ಹೇಳಿದ್ದಾರೆ ಎಂದು ತಿಳಿಸಿದರು.




ಇದನ್ನು ನಾನು ಸ್ವಾಗತ ಮಾಡುತ್ತೇನೆ. ಅವರು ಹೇಳಿದ ಮೇಲೆ ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ವೇಣುಗೋಪಾಲ್, ಸುರ್ಜೆವಾಲ ಎಲ್ಲರೂ ಕುಳಿತು ಮಾತನಾಡಿ ಅಭಿಪ್ರಾಯ ಬಂದಿರುತ್ತೆ ಎಂಬುದು ನನ್ನ ಭಾವನೆ. ಅವರ ಮಾತಿಗೆ ಬಹಳ ಪ್ರಾಮುಖ್ಯತೆ ಇರುತ್ತದೆ. ಎಲ್ಲವೂ ಸದ್ಯಕ್ಕೆ ಅಲ್ಲಿಗೆ ಮುಗಿಯುತ್ತದೆ ಎಂದರು.

ಮಲ್ಲಿಕಾರ್ಜುನ ಖರ್ಗೆ ಹೇಳಿಕೆಯ ನಡುವೆಯೂ ಗೊಂದಲ ವಿಚಾರವಾಗಿ ಮಾತನಾಡಿ, ಬೇರೆ ಬೇರೆಯವರು ಹೇಳುತ್ತಾರೆ, ನಮ್ಮ ಅಭಿಪ್ರಾಯದಲ್ಲಿ ಖರ್ಗೆ ಅವರು ಸುಪ್ರೀಂ ಅಥಾರಿಟಿ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಹೈಕಮಾಂಡ್ ಅವರ ಬಾಯಿಂದ ಮಾತು ಬರುತ್ತದೆ ಎಂದರೆ ಅದನ್ನು ಒಪ್ಪಿಕೊಳ್ಳಬೇಕು. ಅಲ್ಲಿಗೆ ಅಧ್ಯಾಯ ಮುಗಿಯಿತು. ಹೆಚ್ಚು ವ್ಯಾಖ್ಯಾನ ಮಾಡುವುದರಲ್ಲಿ ಅರ್ಥ ಇಲ್ಲ ಎಂದು ಪ್ರತಿಕ್ರಿಯೆ ನೀಡಿದರು.

ಪಂಚರಾಜ್ಯದ ಸಮೀಕ್ಷೆ ವಿಚಾರವಾಗಿ ಮಾತನಾಡಿ, ಸಮೀಕ್ಷೆ ಒಂದೊಂದು ಬಾರಿ ಹೇಗಾಗುತ್ತೆ ಅಂತ ನೋಡಿದ್ದೇವೆ. ಗ್ರೌಂಡ್ ರಿಯಾಲಿಟಿಯನ್ನು ನೋಡಿದ್ದೇವೆ. ಕೇರಳದಲ್ಲಿ ನಮ್ಮ ಸರ್ಕಾರ ಬರುತ್ತದ್ ಅಂತ ಆಶಾವಾದಿಗಳಾಗಿದ್ದೇವೆ. ರಾಜ್ಯದ ಹಲವರು ಅಲ್ಲಿನ ಚುನಾವಣೆಯಲ್ಲಿ ಕೆಲಸ ಮಾಡಿದ್ದರು. ನಾವು ಬರುತ್ತೇವೆ ಎಂದು ವರದಿ ಇದೆ. ಬಂಗಾಳದಲ್ಲಿ ನಡೆದಿರೋ ಘಟನೆ ನೋಡಿದ್ರೆ, ಚುನಾವಣಾ ಆಯೋಗ ಯಾವ ರೀತಿ ಕೆಲಸ ಮಾಡಿದೆ ಎಂದು ನೋಡಿದ್ದೇವೆ. ಅಲ್ಲಿ ಹೋಗಿ ಬಂದ ಅಬ್ಸರ್ವರ್ಗಳನ್ನು ಮಾತಾಡಿಸಿದೆ. ಮೇಡಂ ಅವರಿಗೆ ಬರುವ ಅವಕಾಶ ಇದೆ ಎಂದಿದ್ದಾರೆ. ಕೆಲವು ಮಿಶ್ರ ಪ್ರತಿಕ್ರಿಯೆ ಇದೆ ಎಂದು ಹೇಳಿದ್ದಾರೆ. ತಮಿಳುನಾಡಿನಲ್ಲಿ ಡಿಎಂಕೆ ಬರುತ್ತದೆ ಎಂದಿದ್ದಾರೆ. ಅಸ್ಸಾಂನಲ್ಲಿನ ಸಮೀಕ್ಷೆ ಬಿಜೆಪಿ ಬರುತ್ತದೆ ಎಂದಿದೆ ಎಂದು ತಿಳಿಸಿದರು.

## ಮನೆ ಮುಂದೆ ಪೂಜೆ ಮಾಡಿ ನಿಲ್ಲಿಸಿದ್ದ ಹೊಸ ಜೆಸಿಬಿ ರಾತ್ರೋರಾತ್ರಿ ಮಾಯ: ಇಬ್ಬರು ಆರೋಪಿಗಳ ಬಂಧನ

**ವಿಜಯಪುರು,ಮೇ.1-**ಪೂಜೆ ಮಾಡಿ ಮನೆ ಮುಂದೆ ನಿಲ್ಲಿಸಿದ್ದ ಹೊಸ ಜೆಸಿಬಿಯನ್ನು ಬೆಳಗಾಗುವರಷ್ಟರಲ್ಲಿ ಖದೀಮರು ಕದ್ದೊಯ್ದಿರುವ ಘಟನೆ ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ್ ಕಲಕೇರಿ ಪೊಲೀಸ್ ಠಾಣಾ ವ್ಯಾಪ್ತಿಯ ಗೋಲಗೇರಿ ಗ್ರಾಮದಲ್ಲಿ ನಡೆದಿದೆ. ಈ ಸಂಬಂಧ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.



ಶಿವಾಜಿ ರೈತಮುರೆ ಹಾಗೂ ಹೂವಣ್ಣ ಬಂಡಾಗಾರ ಬಂಧಿತ ಆರೋಪಿಗಳು. ಇಬ್ಬರೂ ಮಹಾರಾಷ್ಟ್ರ ಮೂಲದವರು. ಗೋಲಗೇರಿ ಗ್ರಾಮದಲ್ಲಿ ಸೈಪನ್ ಭಾಗವಾನ್ ಅವರು 35 ಲಕ್ಷ ರೂ. ಖರ್ಚು ಮಾಡಿ ಬೆಳಗ್ಗೆ ಹೊಸ ಜೆಸಿಬಿ ಖರೀದಿಸಿ, ಪೂಜೆ ಮಾಡಿ ಮನೆ ಮುಂದೆ ನಿಲ್ಲಿಸಿದ್ದರು. ಆದರೆ ರಾತೋರಾತ್ರಿ ಜೆಸಿಬಿ ಮಾಯವಾಗಿತ್ತು. ಸಿಸಿ ಕ್ಯಾಮೆರಾ ವಿಡಿಯೋ ಪರಿಶೀಲನೆ ನಡೆಸಿದಾಗ ಕಳ್ಳರು ಕದ್ದೊಯ್ದಿರುವುದು ಗೊತ್ತಾಗಿತ್ತು. ಖದೀಮರು ಜಿಪಿಎಸ್ ಕಿಟ್ ಅನ್ನೇ ಕಟ್ ಮಾಡಿ, ಜೆಸಿಬಿಯೊಂದಿಗೆ ಪರಾರಿಯಾಗಿದ್ದರು. ಈ ಬಗ್ಗೆ ಕಲಕೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಫೋನ್ ಪೇ ಆಧಾರದ ಮೇಲೆ ಆರೋಪಿಗಳು ಸೆರೆ: ಪ್ರಕರಣದ ಬಗ್ಗೆ ಮಾಹಿತಿ ನೀಡಿದ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಕಳ್ಳತನದ ಕುರಿತು ಆರಂಭದಲ್ಲಿ ಸರಿಯಾದ ಮಾಹಿತಿ ಸಿಗಲಿಲ್ಲ. ಒಂದೇ ಬೈಕ್‌ನಲ್ಲಿ ಬಂದ ಇಬ್ಬರಲ್ಲಿ ಓರ್ವ ಜೆಸಿಬಿ ತೆಗೆದುಕೊಂಡು ಹೋದರೆ, ಇನ್ನೋರ್ವ ಬೈಕ್ ತೆಗೆದುಗೊಂಡು ಮುಂದೆ ಹೊರಟಿರುವುದು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಇವರು ದೇವರ ಹಿಪ್ಪರಗಿ ಪಟ್ಟಣದ ಬಂಕ್‌ವೊಂದರಲ್ಲಿ ಬೈಕ್‌ಗೆ ಫೋನ್ ಪೇ ಮೂಲಕ 100 ರೂಪಾಯಿಯ ಪೆಟ್ರೋಲ್ ಹಾಕಿಸಿದ್ದರು. ಇದನ್ನು ಆಧರಿಸಿ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

ಕಡಿಮೆ ದರಕ್ಕೆ ಮಾರಲು ಮುಂದಾಗಿದ್ದ ಖದೀಮರು: ಬಳಿಕ ಇಬ್ಬರೂ ಆರೋಪಿಗಳು ಕದ್ದ ಜೆಸಿಬಿಯನ್ನು ತಾವೇ ಖರೀದಿ ಮಾಡಿಕೊಂಡು ಬಂದಿದ್ದೇವೆ ಎಂಬುದಾಗಿ ಮಹಾರಾಷ್ಟ್ರದ ಹುಲಜಂತಿ ಗ್ರಾಮದಲ್ಲಿ ಹೇಳಿಕೊಂಡಿದ್ದರು. ನಂತರ ಸ್ವಲ್ಪ ದಿನದಲ್ಲಿ ಕಡಿಮೆ ದರಕ್ಕೆ ಜೆಸಿಬಿ ಮಾರಾಟ ಮಾಡಲು ಸಹ ಮುಂದಾಗಿದ್ದರು.

ಪೆಟ್ರೋಲ್ ಬಂಕ್‌ನಲ್ಲಿ ಫೋನ್ ಪೇ ಮಾಡಿದ ನಂಬರ್ ಆಧರಿಸಿ ಅವರ ಹಿಂದೆ ಬಿದ್ದ ನಮ್ಮ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಎಸ್‌ಪಿ ಹೇಳಿದರು.

ಆರೋಪಿಗಳು ಜೆಸಿಬಿಯನ್ನು ಮಾತ್ರ ಕದ್ದಿರುವುದಾ? ಅಥವಾ ಬೇರೆ ಯಾವುದಾದರೂ ಪ್ರಕರಣ ಇವರ ಮೇಲೆ ಇದೆಯಾ ಎಂಬುದರ ಕುರಿತು ಕೂಡ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಸದ್ಯ ಜೆಸಿಬಿ ಕಳೆದುಕೊಂಡಿದ್ದ ಮಾಲೀಕ ಮರಳಿ ಸಿಕ್ಕಿದ್ದಕ್ಕೆ ನಿಟ್ಟುಸಿರು ಬಿಟ್ಟಿದ್ದು, ಪೊಲೀಸರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L